ಬಳ್ಳಾರಿ । ವಿಜಯನಗರ । ಕೊಪ್ಪಳ । ಬೆಂಗಳೂರು । ದಾವಣಗೆರೆ । ಹುಬ್ಬಳ್ಳಿ
ಧಾರವಾಡ । ಹಾವೇರಿ । ಗದಗ । ರಾಯಚೂರು । ವಿಜಯನಗರ । ತುಮಕೂರು

ಅನಂತ ಜನಶಕ್ತಿ

ANANTA JANASHAKTHI — KANNADA DAILY NEWS PAPER

ಸಂಪಾದಕ: ಎಸ್.ವೆಂಕಟೇಸುಲು — ಬಳ್ಳಾರಿ ಜಿಲ್ಲೆಯಿಂದ ಪ್ರಕಟಿತ ಕನ್ನಡ ದೈನಿಕ — EDITOR : S VENKATESULU

ಸಂಪುಟ : 01 ಸಂಚಿಕೆ : 108 ರಿ.ನಂ : ಕೆಎನ್ಎಎನ್ / 26 / ಎ5487 ಬಳ್ಳಾರಿ ಗುರುವಾರ ದಿನಾಂಕ : 12-11-2026 ಪುಟ : 04 ಬೆಲೆ : 2-00

ಪೆಟ್ರೋಲ್‌ನಲ್ಲಿ ಎಥೆನಾಲ್ ಮಿಶ್ರಣ ಬಗ್ಗೆ ಬಿಜೆಪಿ ಮೊದಲು ಉತ್ತರ ಕೊಡಲಿ,
ಆಮೇಲೆ ಬೆಲೆ ಏರಿಕೆ ಬಗ್ಗೆ ಮಾತಾಡಲಿ: ಸಿಎಂ ಟಿಕೆಶಿ



ಮೈಸೂರು : ಹಾಲು, ಮೊಸರು ಮತ್ತು ಬಸ್ ಪ್ರಯಾಣ ದರ ಏರಿಕೆ ವಿರುದ್ಧ ಬಿಜೆಪಿಯ ಪ್ರತಿಭಟನೆಯನ್ನು ಪ್ರಶ್ನಿಸಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮೊದಲು ಪೆಟ್ರೋಲ್‌ನಲ್ಲಿ ಎಥೆನಾಲ್ ಮಿಶ್ರಣದಿಂದ ಉಂಟಾಗುತ್ತಿರುವ ಪರಿಣಾಮಗಳ ಕುರಿತು ಜನಸಾಮಾನ್ಯರಲ್ಲಿ ಎದ್ದಿರುವ ಆತಂಕಗಳಿಗೆ ಬಿಜೆಪಿ ಉತ್ತರ ನೀಡಲಿ ಎಂದು ಬುಧವಾರ ಆಗ್ರಹಿಸಿದ್ದಾರೆ.

ಇಂಧನದಲ್ಲಿ ಎಥೆನಾಲ್ ಮಿಶ್ರಣ ಮಾಡುವುದರಿಂದ ವಾಹನಗಳ ಮೈಲೇಜ್ ಕಡಿಮೆಯಾಗಿದ್ದು, ಎಂಜಿನ್‌ಗಳಿಗೆ ಹಾನಿಯಾಗುತ್ತಿದೆ. ಇದರಿಂದ ವಾಹನಗಳು ಪದೇಪದೆ ಕೆಟ್ಟು ನಿಲ್ಲುತ್ತಿದ್ದು, ವಾಹನ ಮಾಲೀಕರಿಗೆ ಆರ್ಥಿಕ ನಷ್ಟ ಉಂಟಾಗುತ್ತಿದೆ ಎಂದು ಅವರು ಆರೋಪಿಸಿದರು.

ಇಂದು ಮೈಸೂರಿನ ಮಂಡಹಳ್ಳಿ ವಿಮಾನ ನಿಲ್ದಾಣ ಹೊರಗೆ

2ನೇ ಪುಟಕ್ಕೆ...

ಆರ್‌ಎಸ್‌ಎಸ್ ವಿರುದ್ಧ ಸುಳ್ಳು ಮಾಹಿತಿ ಹರಡಿದ ಆರೋಪ: ಗೃಹ ಸಚಿವ ಪ್ರಿಯಾಂಕ್ ಖರ್ಗೆ ಕಾನೂನು ಸಂಕಷ್ಟ..!



ಬೆಂಗಳೂರು: ಮದ್ದುಗುಂಡು ವಶಪಡಿಸಿಕೊಂಡ ಪ್ರಕರಣಕ್ಕೆ ಆರ್‌ಎಸ್‌ಎಸ್ ಹೆಸರನ್ನು ತಳಕು ಹಾಕಿ ತಪ್ಪು ಹಾಗೂ ದಾರಿತಪ್ಪಿಸುವ ಮಾಹಿತಿ ಹರಡಿದ ಆರೋಪದಡಿ ರಾಜ್ಯ ಗೃಹ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಬೆಂಗಳೂರಿನ ಬನಶಂಕರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

2ನೇ ಪುಟಕ್ಕೆ....

ಕೋರ್ಟ್ ಆದೇಶದ ಬೆನ್ನಲ್ಲೇ ದರ್ಶನ್‌ಗೆ ಜೈಲಿನಲ್ಲೇ ಫಿಸಿಯೋಥೆರಪಿ ಚಿಕಿತ್ಸೆ



ಬೆಂಗಳೂರು: ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಸೇರಿರುವ ನಟ ದರ್ಶನ್‌ಗೆ ಕೋರ್ಟ್ ಆದೇಶದ ಬೆನ್ನಲ್ಲೇ ಜೈಲಾಧಿಕಾರಿಗಳು ಫಿಸಿಯೋಥೆರಪಿ ಚಿಕಿತ್ಸೆಯ ವ್ಯವಸ್ಥೆ ಮಾಡಿದ್ದಾರೆ. ಸಂಜಯ್ ಗಾಂಧಿ ಆಸ್ಪತ್ರೆಯ ಫಿಸಿಯೋಥೆರಪಿ ತಜ್ಞರು ಜೈಲಿನಲ್ಲೇ ದರ್ಶನ್‌ಗೆ ಚಿಕಿತ್ಸೆ ನೀಡುತ್ತಿದ್ದಾರೆ. ಕೋರ್ಟ್ ಸೂಚನೆಯಂತೆ ಜೈಲಾಧಿಕಾರಿಗಳು ವೈದ್ಯರಿಗೆ ಮನವಿ ಮಾಡಿದ್ದು, ಅದರಂತೆ ಚಿಕಿತ್ಸೆ ಆರಂಭಿಸಲಾಗಿದೆ. ಪ್ರತಿ ಎರಡು-ಮೂರು ದಿನಗಳಿಗೊಮ್ಮೆ ಜೈಲಿಗೆ ಭೇಟಿ ನೀಡುವ ತಜ್ಞರು ದರ್ಶನ್‌ಗೆ ಫಿಸಿಯೋಥೆರಪಿ ನೀಡಲಿದ್ದಾರೆ.

ವೈದ್ಯರು ಫಿಸಿಯೋಥೆರಪಿಗೆ ಅಗತ್ಯವಿರುವ ವೈದ್ಯಕೀಯ ಉಪಕರಣಗಳನ್ನೆಲ್ಲ ತಂದು ದರ್ಶನ್‌ಗೆ ಚಿಕಿತ್ಸೆ ನೀಡುತ್ತಿದ್ದಾರೆ.

ಜೈಲಿನ ಬ್ಯಾರಕ್‌ನಲ್ಲೇ ಸುಮಾರು ಒಂದೂವರೆ ಗಂಟೆಗಳ ಕಾಲ ಚಿಕಿತ್ಸೆ ನೀಡಿ ತೆರಳುತ್ತಿದ್ದಾರೆ ಎನ್ನಲಾಗಿದೆ.

ಈ ಹಿಂದೆಯೂ ಸಂಜಯ್ ಗಾಂಧಿ ಆಸ್ಪತ್ರೆಯ ವೈದ್ಯರಿಂದಲೇ ದರ್ಶನ್‌ಗೆ ಚಿಕಿತ್ಸೆ ಕೊಡಿಸಲಾಗಿತ್ತು. ಹಂತ ಹಂತವಾಗಿ ಫಿಸಿಯೋಥೆರಪಿ ನೀಡಿದ ಬಳಿಕ ಬೆನ್ನು ನೋವಿನ ಸಮಸ್ಯೆ ಕಡಿಮೆಯಾಗಿತ್ತು. ಇದೀಗ ಮತ್ತೆ ಚಿಕಿತ್ಸೆ ಆರಂಭವಾಗಿದ್ದು, ಬೆನ್ನು ನೋವಿನಿಂದ ದರ್ಶನ್‌ಗೆ ಕೊಂಚ ನಿರಾಳತೆ ಸಿಕ್ಕಿದೆ.

ಬೆಲೆ ಏರಿಕೆ ಖಂಡಿಸಿ ಬಿಜೆಪಿ ಬೃಹತ್ ಪ್ರತಿಭಟನೆ: ಸಿಎಂ ನಿವಾಸಕ್ಕೆ ಮುತ್ತಿಗೆ ಯತ್ನ,
ವಿಜಯೇಂದ್ರ ಸೇರಿ ಹಲವು ನಾಯಕರು ಪೊಲೀಸ್ ವಶಕ್ಕೆ!

ಬೆಂಗಳೂರು: ಅಗತ್ಯ ವಸ್ತುಗಳ ಬೆಲೆ ಏರಿಕೆ ಖಂಡಿಸಿ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ನಾಯಕರು ಬುಧವಾರ ಬೃಹತ್ ಪ್ರತಿಭಟನೆ ನಡೆಸಿದರು. ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿದ ಬಿಜೆಪಿ ನಾಯಕರು, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ನಿವಾಸಕ್ಕೆ ಮುತ್ತಿಗೆ ಹಾಕಲು ಮುಂದಾದರು. ಈ ವೇಳೆ ಪೊಲೀಸರು ಬ್ಯಾರಿಕೇಡ್‌ಗಳನ್ನು ಅಳವಡಿಸಿ ಪ್ರತಿಭಟನಾಕಾರರನ್ನು ತಡೆದರು. ಇದಕ್ಕೆ ಆಕ್ರೋಶಗೊಂಡ ಬಿಜೆಪಿ ಕಾರ್ಯಕರ್ತರು ಬ್ಯಾರಿಕೇಡ್‌ಗಳನ್ನು ದಾಟಿ ಮುನ್ನುಗ್ಗಲು ಯತ್ನಿಸಿದಾಗ ಸ್ಥಳದಲ್ಲಿ ಕೆಲಕಾಲ ಹೈಡ್ರಾಮಾ ನಡೆಯಿತು.

ಪ್ರತಿಭಟನೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಮಾಜಿ ಸಚಿವರಾದ ಸಿ.ಟಿ.ರವಿ, ಆರ್.ಅಶೋಕ್, ಶ್ರೀರಾಮುಲು, ಛಲವಾದಿ ನಾರಾಯಣಸ್ವಾಮಿ, ಶಾಸಕ ಮುನಿರತ್ನ ಸೇರಿದಂತೆ ಹಲವು ನಾಯಕರು ಭಾಗವಹಿಸಿದ್ದರು. ಪರಿಸ್ಥಿತಿ ನಿಯಂತ್ರಿಸಲು ಮುಂದಾದ ಪೊಲೀಸರು ವಿಜಯೇಂದ್ರ ಸೇರಿದಂತೆ ಹಲವು ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರನ್ನು ವಶಕ್ಕೆ ಪಡೆದರು.



2ನೇ ಪುಟಕ್ಕೆ...

ಪಡಿತರ ಚೀಟಿದಾರರಿಗೆ ಸಿಹಿಸುದ್ದಿ: ಇ-ಕೆವೈಸಿ ಗಡುವು ನ.30ರವರೆಗೆ ವಿಸ್ತರಣೆ



ಬೆಂಗಳೂರು: ಪಡಿತರ ಚೀಟಿದಾರರಿಗೆ ರಾಜ್ಯ ಸರ್ಕಾರ ಸಿಹಿಸುದ್ದಿಯೊಂದನ್ನು ನೀಡಿದ್ದು, ಇ-ಕೆವೈಸಿ ಮಾಡಿಸಲು ನೀಡಲಾಗಿದ್ದ ಗಡುವನ್ನು ನವೆಂಬರ್ 30ರವರೆಗೆ ವಿಸ್ತರಿಸಿ ಆದೇಶ ಹೊರಡಿಸಿದೆ.

ಈ ಹಿಂದೆ ನವೆಂಬರ್ 10 ಕೊನೆಯ ದಿನವಾಗಿತ್ತು. ಫಲಾನುಭವಿಗಳಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ಗಡುವು ವಿಸ್ತರಿಸಲಾಗಿದೆ ಎಂದು ಇಲಾಖೆ ತಿಳಿಸಿದೆ.

ಇ-ಕೆವೈಸಿ ಮಾಡಿಸಲು ಫಲಾನುಭವಿಗಳಿಗೆ ಎರಡು ಆಯ್ಕೆಗಳಿವೆ. ಮನೆಯಲ್ಲೇ ಕುಳಿತು ಅನ್ನಸೇವೆ ಆಪ್ ಮೂಲಕ ಮೊಬೈಲ್‌ನಲ್ಲೇ ಈ ಪ್ರಕ್ರಿಯೆ ಪೂರ್ಣಗೊಳಿಸಬಹುದು. ಇಲ್ಲವೇ ಸಮೀಪದ ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡಿ ಇ-ಕೆವೈಸಿ ಮಾಡಿಸಿಕೊಳ್ಳಬಹುದು. ನಿಗದಿತ ಗಡುವಿನೊಳಗೆ ಎಲ್ಲರೂ ಪ್ರಕ್ರಿಯೆ ಪೂರ್ಣಗೊಳಿಸುವಂತೆ ಇಲಾಖೆ ಮನವಿ ಮಾಡಿದೆ.

ನ್ಯಾಯಬೆಲೆ ಅಂಗಡಿಗಳ ಮುಂದೆ ಸರದಿಯಲ್ಲಿ ನಿಲ್ಲುವುದನ್ನು ತಪ್ಪಿಸುವ ಉದ್ದೇಶದಿಂದ ಆಹಾರ ಇಲಾಖೆ

2ನೇ ಪುಟಕ್ಕೆ...

ಹಂಪಿ ಸ್ಮಾರಕಗಳ ಸಂರಕ್ಷಣೆಗೆ ಕೇಂದ್ರದಿಂದ 38 ಕೋಟಿ ಅನುದಾನ; ವಿರೂಪಾಕ್ಷ ದೇವಾಲಯಕ್ಕೂ ಕಾಯಕಲ್ಪ!



ಬೆಂಗಳೂರು: ವಿಶ್ವಪ್ರಸಿದ್ಧ ಹಂಪಿಯ ಐತಿಹಾಸಿಕ ಸ್ಮಾರಕಗಳ ಸಂರಕ್ಷಣೆ ಮತ್ತು ಪುನರುಜ್ಜೀವನಕ್ಕೆ ಕೇಂದ್ರ ಸರ್ಕಾರ 38 ಕೋಟಿ ವೆಚ್ಚದ ಸಮಗ್ರ ಯೋಜನೆ ರೂಪಿಸಿದೆ ಎಂದು ತಿಳಿದುಬಂದಿದೆ.

ವಿಜಯನಗರ ಸಾಮ್ರಾಜ್ಯದ ರಾಜಧಾನಿಯಾಗಿದ್ದ ಹಂಪಿಯ ಪ್ರಮುಖ ದೇವಾಲಯಗಳು, ಮಂಟಪಗಳು ಹಾಗೂ ಐತಿಹಾಸಿಕ ಕಟ್ಟಡಗಳನ್ನು ಸಂರಕ್ಷಿಸುವುದು ಈ ಯೋಜನೆಯ ಉದ್ದೇಶವಾಗಿದೆ. ಕೇಂದ್ರ ಸಂಸ್ಕೃತಿ ಸಚಿವಾಲಯದ ವತಿಯಿಂದ

2ನೇ ಪುಟಕ್ಕೆ...

ಆತಂಕ ಬೇಡ, ಅರ್ಹ ಪ್ರತಿಯೊಬ್ಬ ರೈತನಿಗೂ 5,000 ರೂ. ಬರ ಪರಿಹಾರ: ಡಿ.ಕೆ.ಶಿವಕುಮಾರ್



ಬೆಂಗಳೂರು: ರಾಜ್ಯದ ಬರಪೀಡಿತ ಅರ್ಹ ಪ್ರತಿಯೊಬ್ಬ ರೈತರಿಗೂ ಕನಿಷ್ಠ 5,000 ರೂಪಾಯಿ ಆರ್ಥಿಕ ನೆರವು ನೀಡಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭರವಸೆ ನೀಡಿದ್ದು, ಬ್ಯಾಂಕ್ ಖಾತೆಗಳಲ್ಲಿನ ಲೋಪದೋಷಗಳಿಂದ ಪರಿಹಾರ ಪಾವತಿ ವಿಳಂಬವಾಗಿದೆ, ಫಲಾನುಭವಿಗಳು ಆತಂಕಪಡುವ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ.

ಯಾರೂ ಆತಂಕಪಡುವ ಅಗತ್ಯವಿಲ್ಲ. ಬ್ಯಾಂಕ್ ಖಾತೆಯ ವಿವರಗಳು ಸರಿಯಾಗಿರುವವರಿಗೆ ಹಣ ಜಮೆಯಾಗಿದೆ. ಯಾರ ಖಾತೆಗೆ ಹಣ ಜಮೆಯಾಗಿಲ್ಲವೋ, ಅಂತಹ ಪ್ರಕರಣಗಳಲ್ಲಿ ವಿವರಗಳನ್ನು ಪರಿಶೀಲಿಸಿ ಲೋಪದೋಷಗಳನ್ನು ಸರಿಪಡಿಸುತ್ತೇವೆ ಎಂದು ಹೇಳಿದರು.

ಈ ಉದ್ದೇಶಕ್ಕಾಗಿ ಕೇಂದ್ರ ಸರ್ಕಾರ ಅನುದಾನ ಬಿಡುಗಡೆ ಮಾಡದಿದ್ದರೂ ರಾಜ್ಯ ಸರ್ಕಾರವೇ ರೈತರಿಗೆ ಪರಿಹಾರ ನೀಡಲು ನಿರ್ಧರಿಸಿದೆ. ಪರಿಹಾರ ವಿತರಣೆ ಪ್ರಕ್ರಿಯೆ ಈಗಾಗಲೇ ಆರಂಭವಾಗಿದ್ದು, ಅರ್ಹ ಎಲ್ಲ ರೈತರಿಗೂ ನೆರವು ತಲುಪಿಸಲಾಗುವುದು ಎಂದರು.

2ನೇ ಪುಟಕ್ಕೆ...

ಕುಸಿದುಬಿದ್ದ ಮಾಜಿ ಉಪರಾಷ್ಟ್ರಪತಿ ಧನಕರ್; ಆಸ್ಪತ್ರೆಗೆ ದಾಖಲು

ನವದೆಹಲಿ: ಮಾಜಿ ಉಪರಾಷ್ಟ್ರಪತಿ ಜಗದೀಪ್ ಧನಕರ್ ಬುಧವಾರ ಬೆಳಗಿನ ನಡಿಗೆಯ ವೇಳೆ ಕುಸಿದು ಬಿದ್ದಿದ್ದು, ಅವರನ್ನು ದೆಹಲಿಯ ಏಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ಇಂದು ಎಸ್ಸಿ-ಎಸ್ಟಿ ಕುಂದುಕೊರತೆ ಸಭೆ

ದಾವಣಗೆರೆ : ಜಿಲ್ಲಾ ಪೊಲೀಸ್ ಇಲಾಖೆಯ ವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಕುಂದುಕೊರತೆಗಳನ್ನು ಆಲಿಸುವ ಉದ್ದೇಶದಿಂದ ಇಂದು ಜಿಲ್ಲಾ ಮಟ್ಟದ ಸಭೆಯನ್ನು ಆಯೋಜಿಸಲಾಗಿದೆ. ಅಂದು ಬೆಳಗ್ಗೆ 11 ಗಂಟೆಗೆ ಜಿಲ್ಲಾ ಪೊಲೀಸ್ ಕಚೇರಿಯ ಪೊಲೀಸ್ ಸಭಾಂಗಣದಲ್ಲಿ ನಡೆಯಲಿರುವ ಸಭೆಯ ಅಧ್ಯಕ್ಷತೆಯನ್ನು ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಶೇಖರ್ ಹೆಚ್.ಟಿ., ಐಪಿಎಸ್ ಅವರು ವಹಿಸಲಿದ್ದಾರೆ. ಸಭೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯದ ಮುಖಂಡರು ಹಾಗೂ ಸಾರ್ವಜನಿಕರು ತಮ್ಮ ಸಮಸ್ಯೆ, ಅಹವಾಲು ಮತ್ತು ಕುಂದುಕೊರತೆಗಳನ್ನು ನೇರವಾಗಿ ಸಲ್ಲಿಸಿ ಚರ್ಚಿಸಲು ಅವಕಾಶ ಕಲ್ಪಿಸಲಾಗಿದೆ. ಆದ್ದರಿಂದ ಜಿಲ್ಲೆಯ ಎಸ್ಸಿ-ಎಸ್ಟಿ ಸಮುದಾಯದ ಮುಖಂಡರು ಹಾಗೂ ತಮ್ಮ ಕುಂದುಕೊರತೆಗಳನ್ನು ಸಲ್ಲಿಸಲು ಇಚ್ಛಿಸುವ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸಭೆಗೆ ಆಗಮಿಸುವಂತೆ ಜಿಲ್ಲಾ ಪೊಲೀಸ್ ಅಧೀಕ್ಷಕರು ಮನವಿ ಮಾಡಿದ್ದಾರೆ.

ಗ್ಯಾರಂಟಿ ಅನುಷ್ಠಾನದಲ್ಲಿ ಲೋಪವಾಗದಂತೆ ಎಚ್ಚರ ವಹಿಸಿ: ಕುರಿ ಶಿವಮೂರ್ತಿ

ವಿಜಯನಗರ : ಸರ್ಕಾರದ ಮಹತ್ವಾಕಾಂಕ್ಷೆಯ ಪಂಚ ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ಸಕಾಲದಲ್ಲಿ ತಲುಪುವಂತೆ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸುವಂತೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಕುರಿ ಶಿವಮೂರ್ತಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಆಯೋಜಿಸಿದ್ದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಮತ್ತು ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರತಿಯೊಂದು ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಸೌಲಭ್ಯ ತಲುಪಿರುವ ಕುರಿತು ಅಧಿಕಾರಿಗಳು ಸಮಗ್ರ ಪರಿಶೀಲನೆ ನಡೆಸಬೇಕು. ತಾಂತ್ರಿಕ ಕಾರಣಗಳು, ದಾಖಲೆಗಳ

2ನೇ ಪುಟಕ್ಕೆ...



ದಿನಾಂಕ : 12-11-2026 | ಗುರುವಾರ

ಅನಂತ ಜನಶಕ್ತಿ

ಪುಟ » 2

ಪೆಟ್ರೋಲ್‌ನಲ್ಲಿ ಎಥೆನಾಲ್ ಮಿಶ್ರಣ ಬಗ್ಗೆ ಬಿಜೆಪಿ ಮೊದಲು ಉತ್ತರ ಕೊಡಲಿ, ಆಮೇಲೆ ಬೆಲೆ ಏರಿಕೆ ಬಗ್ಗೆ ಮಾತಾಡಲಿ: ಸಿಎಂ ಡಿಕೆಶಿ

–1ನೇ ಪುಟದಿಂದ..

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಎಥೆನಾಲ್ ಮಿಶ್ರಣವನ್ನು ಶೇ.20ಕ್ಕೆ ಸೀಮಿತಗೊಳಿಸುವ ಬದಲು, ದೇಶಾದ್ಯಂತ ವಾಹನಗಳಿಗೆ ಬಳಸುವ ಇಂಧನದಲ್ಲಿ ಅದರ ಪ್ರಮಾಣವನ್ನು ಶೇ.20ರಿಂದ 30ಕ್ಕೆ ಹೆಚ್ಚಿಸಲಾಗಿದೆ. ಇದರಿಂದ ವಾಹನಗಳ ಮೈಲೇಜ್ ಕಡಿಮೆಯಾಗಿದೆ. ವಾಹನಗಳು ಮತ್ತು ಎಂಜಿನ್‌ಗಳು ಹಾನಿಗೊಳಗಾಗುತ್ತಿವೆ. ವಾಹನಗಳು ಪದೇಪದೆ ಕೆಟ್ಟು ನಿಲ್ಲುತ್ತಿವೆ" ಎಂದು ಅವರು ಹೇಳಿದರು.

ಈ ವಿಚಾರದಲ್ಲಿ ಕೇಂದ್ರ ಸರ್ಕಾರದ ಹೊಣೆಗಾರಿಕೆಯನ್ನು ಪ್ರಶ್ನಿಸಿದ ಡಿ ಕೆ ಶಿವಕುಮಾರ್, 67 ಸ್ಥಳಗಳಿಂದ ಇಂಧನ ಮಾದರಿಗಳನ್ನು ಸಂಗ್ರಹಿಸಲಾಗಿದೆ. ಈ ವಿಷಯವನ್ನು ಪರಿಶೀಲನೆಗಾಗಿ ಕೇಂದ್ರ ಸರ್ಕಾರ ಮತ್ತು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತರಲಾಗಿದೆ ಎಂದು ತಿಳಿಸಿದರು.

ಈ ಸಮಸ್ಯೆ ದೇಶಾದ್ಯಂತದ ವಾಹನ ಮಾಲೀಕರ ಮೇಲೆ ಪರಿಣಾಮ ಬೀರುತ್ತಿದೆ. ವಾಹನಗಳಿಗೆ ಹಾನಿಯಾಗುತ್ತಿರುವುದರಿಂದ ಮತ್ತು ಅವುಗಳ ಬಳಕೆಯ ಅವಧಿ ಕಡಿಮೆಯಾಗುತ್ತಿರುವುದರಿಂದ ಜನರು ನಷ್ಟ ಅನುಭವಿಸುತ್ತಿದ್ದಾರೆ ಎಂದು ಆರೋಪಿಸಿದರು.

ಆರ್‌ಎಸ್‌ಎಸ್ ವಿರುದ್ಧ ಸುಳ್ಳು ಮಾಹಿತಿ ಹರಡಿದ ಆರೋಪ: ಗೃಹ ಸಚಿವ ಪ್ರಿಯಾಂಕ್ ಖರ್ಗೆ ಕಾನೂನು ಸಂಕಷ್ಟ..!

–1ನೇ ಪುಟದಿಂದ..

ಸಾಮಾಜಿಕ ಕಾರ್ಯಕರ್ತರೊಬ್ಬರು ನವೆಂಬರ್ 10ರಂದು ಈ ದೂರು ಸಲ್ಲಿಸಿದ್ದು, ಸಚಿವರು ತಮ್ಮ ಅಧಿಕೃತ ಎಕ್ಸ್ ಖಾತೆ–ಯ ಮೂಲಕ ಸುಳ್ಳು ಮಾಹಿತಿ ಪ್ರಸಾರ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ.

ಬಿಹಾರ ಮತ್ತು ಹರಿಯಾಣದಲ್ಲಿ ಒಟ್ಟು 44,250 ಜೀವಂತ ಕಾರ್ಟ್ರಿಡ್ಜ್‌ಗಳನ್ನು ವಶಪಡಿಸಿಕೊಂಡ ಪ್ರಕರಣಕ್ಕೆ ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್) ಹೆಸರನ್ನು ಉದ್ದೇಶಪೂರ್ವಕವಾಗಿ ತಳಕು ಹಾಕಲು ಪ್ರಿಯಾಂಕ್ ಖರ್ಗೆ ಪ್ರಯತ್ನಿಸಿದ್ದಾರೆ ಎಂಬುದು ದೂರುದಾರರ ಆರೋಪವಾಗಿದೆ.

ಸಚಿವರ ಹೇಳಿಕೆಗಳು ಮತ್ತು ಪರೋಕ್ಷ ಸೂಚನೆಗಳು, ಈ ಅಕ್ರಮ ಚಟುವಟಿಕೆಯಲ್ಲಿ ಆರ್‌ಎಸ್‌ಎಸ್‌ನ ಪಾತ್ರವಿದೆ ಎಂಬ ಅಭಿಪ್ರಾಯ ಮೂಡಿಸುವಂತಿವೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಸಂಬಂಧವಿಲ್ಲದಿದ್ದರೂ ಸಂಘಟನೆಯ ಹೆಸರನ್ನು ಪ್ರಕರಣದೊಂದಿಗೆ ಜೋಡಿಸುವ ಮೂಲಕ ಸಾರ್ವಜನಿಕರಲ್ಲಿ ತಪ್ಪು ಕಲ್ಪನೆ ಮೂಡಿಸಲಾಗಿದೆ.

ಮಾಹಿತಿ ಸುಳ್ಳು ಎಂಬುದು ತಿಳಿದಿದ್ದರೂ ಅದನ್ನು ಹರಡಿದ್ದರೆ ಕ್ರಿಮಿನಲ್ ತನಿಖೆ ನಡೆಸಬೇಕೆಂದು ದೂರುದಾರರು ಒತ್ತಾಯಿಸಿದ್ದಾರೆ. ಇಂತಹ ಹೇಳಿಕೆಗಳು ಕೋಮು ಸೌಹಾರ್ದತೆಗೆ ಧಕ್ಕೆ ತರುವುದರ ಜತೆಗೆ ಸಾರ್ವಜನಿಕರಲ್ಲಿ ದ್ವೇಷ ಮತ್ತು ಅಶಾಂತಿಗೆ ಕಾರಣವಾಗಬಹುದು ಎಂದೂ ಆರೋಪಿಸಿದ್ದಾರೆ.

ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್) 2023ರ ಸೆಕ್ಷನ್ 192, 196 ಮತ್ತು 353ರ ಅಡಿಯಲ್ಲಿ ಎಫ್‌ಐಆರ್ ದಾಖಲಿಸಿ ತನಿಖೆ ನಡೆಸುವಂತೆ ದೂರುದಾರರು ಪೊಲೀಸರನ್ನು ಕೋರಿದ್ದಾರೆ.

ಈ ಸೆಕ್ಷನ್‌ಗಳು ಗಲಭೆಗೆ ಪ್ರಚೋದನೆ ನೀಡುವುದು, ವಿವಿಧ ಗುಂಪುಗಳ ನಡುವೆ ದ್ವೇಷ ಹರಡುವುದು ಹಾಗೂ ಸಾರ್ವಜನಿಕ ಕಿಡಿಗೇಡಿತನಕ್ಕೆ ಕಾರಣವಾಗುವ ಹೇಳಿಕೆಗಳಿಗೆ ಸಂಬಂಧಿಸಿವೆ.

ರಾಜ್ಯದ ಕಾನೂನು ಸುವ್ಯವಸ್ಥೆಯ ಜವಾಬ್ದಾರಿ ಹೊತ್ತಿರುವ ಗೃಹ ಸಚಿವರೇ ಇಂತಹ ಮಾಹಿತಿ ಹರಡಿದ್ದಾರೆ ಎಂಬ ಆರೋಪ ಗಂಭೀರವಾಗಿದೆ ಎಂದು ದೂರಿನಲ್ಲಿ ಹೇಳಲಾಗಿದೆ.

ಸಚಿವರ ಹೇಳಿಕೆಗಳಿಗೆ ಸಾರ್ವಜನಿಕ ವಲಯದಲ್ಲಿ ಹೆಚ್ಚಿನ ಪ್ರಭಾವವಿರುವುದರಿಂದ, ಅವರಿಂದ ಹರಡುವ ತಪ್ಪು ಮಾಹಿತಿ ಅನಗತ್ಯ ಅನುಮಾನ ಮತ್ತು ದ್ವೇಷಕ್ಕೆ ಕಾರಣವಾಗಬಹುದು. ಅಲ್ಲದೆ, ಸಂಬಂಧಿತ ಸಂಘಟನೆಗಳ ಗೌರವಕ್ಕೂ ಧಕ್ಕೆಯಾಗಬಹುದು ಎಂಬುದು ದೂರುದಾರರ ವಾದ.

ಸಾಮಾನ್ಯ ನಾಗರಿಕರಿಗೆ ಅನ್ವಯಿಸುವ ಕಾನೂನು ಸಚಿವರಿಗೂ ಅನ್ವಯಿಸಬೇಕು. ಸಾಂವಿಧಾನಿಕ ಹುದ್ದೆಯಲ್ಲಿರುವುದರಿಂದ ಕ್ರಿಮಿನಲ್ ಕಾನೂನಿನಿಂದ ವಿನಾಯಿತಿ ಸಿಗುವುದಿಲ್ಲ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಹೀಗಾಗಿ, ಆರೋಪಗಳಿಗೆ ಸಂಬಂಧಿಸಿದ ಸಾಕ್ಷ್ಯಗಳು ಗಂಭೀರ ಅಪರಾಧದ ಸುಳಿವು ನೀಡಿದರೆ ಎಫ್‌ಐಆರ್ ದಾಖಲಿಸಿ ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಒತ್ತಾಯಿಸಲಾಗಿದೆ. ಪ್ರಕರಣಕ್ಕೆ ಸಂಬಂಧಿಸಿದ ಎಲೆಕ್ಟ್ರಾನಿಕ್ ದಾಖಲೆಗಳನ್ನು ನಾಶವಾಗದಂತೆ ಸಂರಕ್ಷಿಸಬೇಕು ಎಂದೂ ಮನವಿ ಮಾಡಲಾಗಿದೆ.

ಕಾರ್ಟ್ರಿಡ್ಜ್‌ಗಳ ವಶ ಪ್ರಕರಣವು ಅಂತರರಾಜ್ಯ ಮದ್ದುಗುಂಡು ಕಳ್ಳಸಾಗಣೆ ಜಾಲವನ್ನು ಬಯಲಿಗೆಳೆದಿದೆ ಎಂದು ಪ್ರಿಯಾಂಕ್ ಖರ್ಗೆ ತಮ್ಮ ಎಕ್ಸ್ ಪೋಸ್ಟ್‌ನಲ್ಲಿ ಹೇಳಿದ್ದರು.

ಈ ಪ್ರಕರಣದಲ್ಲಿ ಭಾಗಿಯಾದವರು ಆರ್‌ಎಸ್‌ಎಸ್ ಸಮವಸ್ತ್ರ ಧರಿಸಿರುವ ಕುರಿತು ವರದಿಗಳು ಮತ್ತು ಚಿತ್ರಗಳು ಲಭ್ಯವಿವೆ ಎಂದು ಉಲ್ಲೇಖಿಸಿದ್ದರು.

ಇದೇ ವಿಚಾರವಾಗಿ ಆರ್‌ಎಸ್‌ಎಸ್ ಮತ್ತು ಬಿಜೆಪಿ ಐದು ಪ್ರಶ್ನೆಗಳಿಗೆ ಉತ್ತರಿಸಬೇಕು ಎಂದು ಆಗ್ರಹಿಸಿದ್ದ ಅವರು, ಆರ್‌ಎಸ್‌ಎಸ್ ನೋಂದಣಿಯಾಗಬೇಕು ಎಂಬ ತಮ್ಮ ಹಿಂದಿನ ಒತ್ತಾಯವನ್ನೂ ಮತ್ತೊಮ್ಮೆ ಪ್ರಸ್ತಾಪಿಸಿದ್ದರು.

ಬಿಹಾರದ ಭೋಜ್‌ಪುರ ಜಿಲ್ಲೆಯಲ್ಲಿ ಪೊಲೀಸರು ಸುಮಾರು 19,250 ಜೀವಂತ ಕಾರ್ಟ್ರಿಡ್ಜ್‌ಗಳನ್ನು ವಶಪಡಿಸಿಕೊಂಡಿದ್ದರು. ಮತ್ತೊಂದೆಡೆ, ಹರಿಯಾಣದ ವಿಶೇಷ ಕಾರ್ಯಪಡೆ (ಎಸ್‌ಟಿಎಫ್) ಝುಜ್ಜರ್ ಜಿಲ್ಲೆಯ ರೋಹಾಡ್ ಟೋಲ್ ಪ್ಲಾಜಾ ಬಳಿ ಸುಮಾರು 25,000 ಕಾರ್ಟ್ರಿಡ್ಜ್‌ಗಳನ್ನು ಜಪ್ತಿ ಮಾಡಿತ್ತು.

ಎರಡೂ ರಾಜ್ಯಗಳಲ್ಲಿ ನಡೆದ ಈ ಕಾರ್ಯಾಚರಣೆಗಳು ಅಂತರರಾಜ್ಯ ಮದ್ದುಗುಂಡು ಕಳ್ಳಸಾಗಣೆ ಜಾಲದ ಸುಳಿವು ನೀಡಿದ್ದು, ಈ ಸಂಬಂಧ ತನಿಖೆ ಮುಂದುವರಿದಿದೆ. ಪ್ರಕರಣದಲ್ಲಿ ಯಾವುದೇ ಸಂಘಟನೆಯ ಪಾತ್ರ ಇನ್ನೂ ದೃಢಪಟ್ಟಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ ಎಂದು ಎಎನ್‌ಐ ವರದಿ ಮಾಡಿದೆ.

ಪಡಿತರ ಚೀಟಿದಾರರಿಗೆ ಸಿಹಿಸುದ್ದಿ: ಇ–ಕೆವೈಸಿ ಗಡುವು ನ.30ರವರೆಗೆ ವಿಸ್ತರಣೆ

1ನೇ ಪುಟದಿಂದ..

ಅನ್ನಸೇವೆ ಆಪ್ ಸೌಲಭ್ಯವನ್ನು ರಾಜ್ಯದ ಎಲ್ಲ 31 ಜಿಲ್ಲೆಗಳಿಗೂ ವಿಸ್ತರಿಸಿದೆ. ಕೇಂದ್ರ ಸರ್ಕಾರದ ನಿಯಮದಂತೆ ಪ್ರತಿ ಐದು ವರ್ಷಕ್ಕೊಮ್ಮೆ ಇ–ಕೆವೈಸಿ ಮಾಡಿಸುವುದು ಕಡ್ಡಾಯವಾಗಿದೆ.

ಹಿರಿಯ ನಾಗರಿಕರು ಮತ್ತು ಮಕ್ಕಳ ಅನುಕೂಲಕ್ಕಾಗಿ ಮುಖ ಗುರುತಿಸುವಿಕೆ ಮೂಲಕ ದೃಢೀಕರಣ ಮಾಡುವ ವ್ಯವಸ್ಥೆಯನ್ನೂ ಕಲ್ಪಿಸಲಾಗಿದೆ. ಉದ್ಯೋಗ ಸೇರಿದಂತೆ ವಿವಿಧ ಕಾರಣಗಳಿಗಾಗಿ ನಗರ ಪ್ರದೇಶಗಳಿಗೆ ವಲಸೆ ಹೋಗಿರುವವರು ಇ–ಕೆವೈಸಿಗಾಗಿ ತಮ್ಮ ಊರಿಗೆ ಹಿಂದಿರುಗುವ ಅನಿವಾರ್ಯತೆಯನ್ನೂ ಈ ಸೌಲಭ್ಯ ತಪ್ಪಿಸಲಿದೆ.

ಮೊಬೈಲ್‌ನಲ್ಲಿರುವ ಅನ್ನಸೇವೆ ಆಪ್ ತೆರೆಯಿರಿ. ಲಾಗಿನ್ ಆಯ್ಕೆಯಲ್ಲಿ 'ಸ್ವಯಂ/ನಾಗರಿಕ' ಎಂಬುದನ್ನು ಆರಿಸಿಕೊಳ್ಳಿ.

ಬಳಿಕ ಜಿಲ್ಲೆಗಳ ಪಟ್ಟಿಯಿಂದ ನಿಮ್ಮ ಜಿಲ್ಲೆಯನ್ನು ಆಯ್ಕೆ ಮಾಡಿ, ಪಡಿತರ ಚೀಟಿ ಸಂಖ್ಯೆಯನ್ನು ನಮೂದಿಸಿ. ನಂತರ ರೇಷನ್ ಕಾರ್ಡ್‌ಗೆ ಜೋಡಣೆಯಾಗಿರುವ ಮೊಬೈಲ್ ಸಂಖ್ಯೆಯನ್ನು ನಮೂದಿಸಿ, ಅದಕ್ಕೆ ಬರುವ ಒಟಿಪಿ ದಾಖಲಿಸಿ.

ಮುಂದಿನ ಪುಟದಲ್ಲಿ ಪಡಿತರ ಚೀಟಿಯಲ್ಲಿರುವ ಕುಟುಂಬ ಸದಸ್ಯರ ವಿವರಗಳು ಕಾಣಿಸಿಕೊಳ್ಳುತ್ತವೆ. ಇ–ಕೆವೈಸಿ ಮಾಡಿಸಬೇಕಾದ ಸದಸ್ಯರನ್ನು ಆಯ್ಕೆ ಮಾಡಿ, ಆಪ್ ನೀಡುವ ಸೂಚನೆಗಳನ್ನು ಅನುಸರಿಸಿ ಮುಖ ಗುರುತಿಸುವಿಕೆ ಪ್ರಕ್ರಿಯೆ ಪೂರ್ಣಗೊಳಿಸಿ. ಕೊನೆಯಲ್ಲಿ 'ಇ–ಕೆವೈಸಿ ಯಶಸ್ವಿ' ಎಂಬ ಸಂದೇಶ ಬಂದರೆ ನಿಮ್ಮ ಪ್ರಕ್ರಿಯೆ ಪೂರ್ಣಗೊಂಡಿದೆ ಎಂದರ್ಥ.

ಸಚಿವ ರಿಜ್ವಾನ್ ಅರ್ಷದ್ ಅವರು ಇ–ಕೆವೈಸಿ ಪ್ರಕ್ರಿಯೆಯನ್ನು ವಿವರಿಸುವ ವಿಡಿಯೋವನ್ನು ಈ ಹಿಂದೆಯೇ ತಮ್ಮ ಸಾಮಾಜಿಕ ಜಾಲತಾಣ ಖಾತೆಗಳಲ್ಲಿ ಹಂಚಿಕೊಂಡಿದ್ದಾರೆ.

ಪ್ರಿಯ ಓದುಗರೆ ನಿಮ್ಮ ಪ್ರೀತಿಯ ಅನಂತ ಜನಶ ಕನ್ನಡ ದಿನ ಪತ್ರಿಕೆಯನ್ನು ತಪ್ಪದೇ ಓದಿ ಪ್ರೋತ್ಸಾಹಿಸಿ

ಗ್ಯಾರಂಟಿ ಅನುಷ್ಠಾನದಲ್ಲಿ ಲೋಪವಾಗದಂತೆ ಎಚ್ಚರ ವಹಿಸಿ: ಕುರಿ ಶಿವಮೂರ್ತಿ

1ನೇ ಪುಟದಿಂದ..

ಕೊರತೆ ಅಥವಾ ಇಲಾಖೆಗಳ ನಡುವಿನ ಸಮನ್ವಯದ ಅಭಾವದಿಂದ ಯಾವುದೇ ಫಲಾನುಭವಿಗಳು ಸೌಲಭ್ಯದಿಂದ ವಂಚಿತರಾಗಬಾರದು. ಬಾಕಿ ಇರುವ ಅರ್ಜಿಗಳು ಹಾಗೂ ಫಲಾನುಭವಿಗಳ ಸಮಸ್ಯೆಗಳನ್ನು ಗುರುತಿಸಿ ಅವುಗಳ ವಿಲೇವಾರಿಗೆ ಕಾಲಮಿತಿ ನಿಗದಿಪಡಿಸಬೇಕು. ಯೋಜನೆಗಳ ಅನುಷ್ಠಾನದ ಪ್ರಗತಿಯನ್ನು ನಿರಂತರವಾಗಿ ಮೇಲ್ವಿಚಾರಣೆ ನಡೆಸಿ, ಮುಂದಿನ ಸಭೆಯೊಳಗೆ ನಿಗದಿತ ಗುರಿ ಸಾಧಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಬೇಕು ಎಂದು ನಿರ್ದೇಶಿಸಿದರು.

ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರ ಸದಸ್ಯರು ಮಾತನಾಡಿ, ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಸ್ವಚ್ಛತೆ ಮರೀಚಿಕೆಯಾಗಿದ್ದು, ಐತಿಹಾಸಿಕ ಸ್ಥಳಕ್ಕೆ ಆಗಮಿಸುವ ಸಾರ್ವಜನಿಕರಿಗೆ ಪ್ರವಾಸಿಗರಿಗೆ ಮುಜುಗರ ಉಂಟಾಗುತ್ತಿದೆ. ರಾತ್ರಿ ವೇಳೆ ಸಾರ್ವಜನಿಕರ ಅದರಲ್ಲೂ ವಿಶೇಷವಾಗಿ ಮಹಿಳೆಯರ ಸುರಕ್ಷತೆಗಾಗಿ ಸಿಸಿಟಿವಿ ಅಳವಡಿಸಬೇಕು. ನಗರ ವ್ಯಾಪ್ತಿಯಲ್ಲಿ ನಗರ ಸಾರಿಗೆ ವ್ಯವಸ್ಥೆ ಸಮರ್ಪಕವಾಗಿಲ್ಲದಿರುವ ಬಗ್ಗೆ ಸಾಕಷ್ಟು ದೂರುಗಳಿವೆ. ಆದ್ದರಿಂದ ಇನ್ನಷ್ಟು ಸಾರಿಗೆ ವ್ಯವಸ್ಥೆ ಕಲ್ಪಿಸಬೇಕು ಎಂದು ಸಭೆಯಲ್ಲಿ ಮನವಿ ಮಾಡಿದರು.

ಅನ್ನಭಾಗ್ಯ: ಜಿಲ್ಲೆಯಲ್ಲಿ ಒಟ್ಟು 3.36 ಲಕ್ಷ ಬಿಪಿಎಲ್ ಪಡಿತರ ಚೀಟಿಗಳ ಮೂಲಕ 12.83 ಲಕ್ಷ ಫಲಾನುಭವಿಗಳಿಗೆ 2023ರ ಜುಲೈನಿಂದ 2024ರ ಡಿಸೆಂಬರ್‌ವರೆಗೆ ಒಟ್ಟು ರೂ.285 ಕೋಟಿ ಹಣ ಪಾವತಿಸಲಾಗಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪನಿರ್ದೇಶಕ ರಿಯಾಜ್ ಮಾಹಿತಿ ನೀಡಿದರು.

ಗೃಹಲಕ್ಷ್ಮಿ: 2026ರ ಮೇ ವೇಳೆಗೆ ಶೇ.99ರಷ್ಟು ಫಲಾನುಭವಿಗಳ ನೋಂದಣಿ ಪೂರ್ಣಗೊಂಡಿದೆ. ಬಾಕಿ ಇರುವ 183 ಫಲಾನುಭವಿಗಳ ಪರಿಶೀಲನೆ ಹಾಗೂ ಮೃತಪಟ್ಟವರ ಪಡಿತರ ಚೀಟಿಗಳ ರದ್ದತಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಆಗಸ್ಟ್, ಸೆಪ್ಟೆಂಬರ್ ಮತ್ತು ಅಕ್ಟೋಬರ್ ತಿಂಗಳ ಕಂತಿನ ಹಣವನ್ನು ಒಟ್ಟಿಗೆ ಪಾವತಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಗಂಗಪ್ಪ ಸಭೆಗೆ ತಿಳಿಸಿದರು.

ಗೃಹಜ್ಯೋತಿ: ಯೋಜನೆಯಡಿ ಅರ್ಹ ಫಲಾನುಭವಿಗಳ ಮರುಸಮೀಕ್ಷೆ ನಡೆಸಲಾಗಿದ್ದು, ಬಾಡಿಗೆದಾರರ ಬಾಡಿಗೆ ಕರಾರು ಪತ್ರ ಸೇರಿದಂತೆ ಅಗತ್ಯ ದಾಖಲೆಗಳನ್ನು ಪರಿಶೀಲಿಸಲಾಗಿದೆ ಎಂದು ಜೆಸ್ಕಾಂ ಕಾರ್ಯನಿರ್ವಾಹಕ ಅಭಿಯಂತರ ವಿಷ್ಣು ತಿಳಿಸಿದರು. ಈ ವೇಳೆ ಮಾತನಾಡಿದ ಜಿ.ಪಂ. ಸಿಇಒ ಅನಧಿಕೃತ ವಿದ್ಯುತ್ ಸಂಪರ್ಕಗಳ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಬೇಕು. ಹಳೆಯ ವಿದ್ಯುತ್ ಕಂಬ ಹಾಗೂ ತಂತಿಗಳ ಬದಲಾವಣೆಗೆ ಸ್ಥಳ ಪರಿಶೀಲನೆ ನಡೆಸಿ ಸಮಸ್ಯೆಗಳನ್ನು ಪರಿಹರಿಸಬೇಕು ಎಂದು ಸೂಚಿಸಿದರು.

ಕನ್ನೇರಿ ಸ್ವಾಮೀಜಿ ಕ್ಷಮೆಯಾಚಿಸಲಿ: ಮಾಜಿ ಶಾಸಕ ರಾಜು ಆಲಗೂರ ನ.26ರಂದು ಬೃಹತ್ ಹೋರಾಟಕ್ಕೆ ಸಿದ್ಧತೆ–ಕ್ಷಮೆ ಕೇಳದಿದ್ದರೆ ಮುತ್ತಿಗೆ ಎಚ್ಚರಿಕೆ

1ನೇ ಪುಟದಿಂದ..

ಗೌರವ ಮತ್ತು ಭಕ್ತಿ ಇದೆ. ಆದರೆ ಅಧ್ಯಯನ ಹಾಗೂ ವಿವೇಚನೆಯಿಲ್ಲದೆ ಸಂವಿಧಾನ ವಿರೋಧಿ ಹೇಳಿಕೆ ನೀಡುವುದನ್ನು ಸಹಿಸಲು ಸಾಧ್ಯವಿಲ್ಲ. ಯಾರನ್ನೋ ಮೆಚ್ಚಿಸುವ ಉದ್ದೇಶದಿಂದ ಆಧಾರರಹಿತ ಹೇಳಿಕೆ ನೀಡುವುದು ಸರಿಯಲ್ಲ. ಇಂತಹ ಹೇಳಿಕೆಗಳು ಸಮಾಜದಲ್ಲಿ ಗೊಂದಲ ಸೃಷ್ಟಿಸುತ್ತವೆ ಎಂದು ಆಕ್ಷೇಪಿಸಿದರು.

ಸ್ವಾಮೀಜಿಯವರು ಕ್ಷಮೆಯಾಚಿಸದಿದ್ದರೆ ಅವರಿಗೆ ಮುತ್ತಿಗೆ ಹಾಕುವ ಹೋರಾಟ ನಡೆಸಲಾಗುವುದು. ಈ ಸಂಬಂಧ ಈಗಾಗಲೇ ದೂರು ದಾಖಲಿಸಲು ಸಿದ್ಧತೆ ನಡೆಸಲಾಗಿದ್ದು, ನವೆಂಬರ್ 26ರಂದು ಬೃಹತ್ ಹೋರಾಟ ಹಮ್ಮಿಕೊಳ್ಳುವ ಕುರಿತು ಚರ್ಚೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಅಹಿಂದ ಮುಖಂಡರಾದ ಸೋಮನಾಥ ಕಳ್ಳಿಮನಿ, ಚಂದ್ರಶೇಖರ ಕೊಡಬಾಗಿ, ರಮೇಶ ಆಸಂಗಿ, ಅಭಿಷೇಕ ಚಕ್ರವರ್ತಿ ಸೇರಿದಂತೆ ಹಲವು ದಲಿತ, ಹಿಂದುಳಿದ ಹಾಗೂ ಪ್ರಗತಿಪರ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.

ಕುಸಿದುಬಿದ್ದ ಮಾಜಿ ಉಪರಾಷ್ಟ್ರಪತಿ ಧನಕರ್; ಆಸ್ಪತ್ರೆಗೆ ದಾಖಲು

1ನೇ ಪುಟದಿಂದ..

ಬಳಿಕ, ಐಎಲ್‌ಬಿಎಸ್ ವೈದ್ಯಕೀಯ ತಂಡ ಮತ್ತು ಏಮ್ಸ್‌ನ ವೈದ್ಯ ಸಂದೀಪ್ ಸೇಠ್ ಅವರು ಅವರಿಗೆ ಪ್ರಾಥಮಿಕ ಚಿಕಿತ್ಸೆ ನೀಡಿದರು.

ಆದಾಗ್ಯೂ, ಅವರ ಆರೋಗ್ಯದ ಬಗ್ಗೆ ಆತಂಕವಿದ್ದಿದ್ದರಿಂದ, ನಂತರ ಅವರನ್ನು ಆಂಬ್ಯುಲೆನ್ಸ್ ಮೂಲಕ ಏಮ್ಸ್ ಆಸ್ಪತ್ರೆಗೆ ಸ್ಥಳಾಂತರಿಸಲಾಯಿತು ಎಂದು ಮೂಲಗಳು ತಿಳಿಸಿವೆ.

75 ವರ್ಷ ವಯಸ್ಸಿನ ಧನಕರ್ ಅವರನ್ನು ಆಸ್ಪತ್ರೆಯ 'ಕಾರ್ಡಿಯೋ–ನ್ಯೂರೋ ಸೆಂಟರ್'ಗೆ (ಹೃದಯ ಮತ್ತು ನರ–ರೋಗ ವಿಭಾಗ) ದಾಖಲಿಸಲಾಗಿದ್ದು, ಅಲ್ಲಿ ಕಾರ್ಡಿಯಾಲಜಿ ವಿಭಾಗದ ವೈದ್ಯರು ಅವರ ಆರೋಗ್ಯ ಸ್ಥಿತಿಯನ್ನು ಪರಿಶೀಲಿಸುತ್ತಿದ್ದಾರೆ ಮತ್ತು ಚಿಕಿತ್ಸೆ ನೀಡುತ್ತಿದ್ದಾರೆ.

ಅವರ ಆರೋಗ್ಯ ಸ್ಥಿತಿಯ ಕುರಿತು ತಕ್ಷಣಕ್ಕೆ ಯಾವುದೇ ಮಾಹಿತಿ ಲಭ್ಯವಿಲ್ಲ. ಏಮ್ಸ್ ಆಡಳಿತ ಮಂಡಳಿಯು ಈವರೆಗೆ ಯಾವುದೇ ಅಧಿಕೃತ ಹೇಳಿಕೆಯನ್ನು ನೀಡಿಲ್ಲ. ಧನಕರ್ ಆಗಸ್ಟ್ 2022 ರಿಂದ ಜುಲೈ 2025 ರವರೆಗೆ ಭಾರತದ 14ನೇ ಉಪರಾಷ್ಟ್ರಪತಿಯಾಗಿ ಸೇವೆ ಸಲ್ಲಿಸಿದರು; ನಂತರ ಅವರು ಆ ಹುದ್ದೆಗೆ ರಾಜೀನಾಮೆ ನೀಡಿದ್ದರು.

ಆತಂಕ ಬೇಡ, ಅರ್ಹ ಪ್ರತಿಯೊಬ್ಬ ರೈತನಿಗೂ 5,000 ರೂ. ಬರ ಪರಿಹಾರ: ಡಿ ಕೆ ಶಿವಕುಮಾರ್

1ನೇ ಪುಟದಿಂದ..

ಪರಿಹಾರ ಪಾವತಿಯಲ್ಲಿ ವಿಳಂಬವಾಗಲು ಕಾರಣಗಳನ್ನು ವಿವರಿಸಿದ ಮುಖ್ಯಮಂತ್ರಿ, ಕೆಲವು ಫಲಾನುಭವಿಗಳು ತಪ್ಪಾದ ಬ್ಯಾಂಕ್ ಖಾತೆ ವಿವರಗಳನ್ನು ನೀಡಿದ್ದರೆ, ಇನ್ನು ಕೆಲವು ಖಾತೆಗಳು ಸಾಲಗಳಿಗೆ ಜೋಡಣೆಯಾಗಿವೆ ಎಂದು ಹೇಳಿದರು. ಇಂತಹ ಪ್ರಕರಣಗಳನ್ನು ಸರ್ಕಾರ ಪರಿಶೀಲಿಸುತ್ತಿದ್ದು, ಪರಿಹಾರ ವಿಳಂಬಕ್ಕೆ ಅಧಿಕಾರಿಗಳನ್ನು ಹೊಣೆ ಮಾಡಬಾರದು ಎಂದು ಸ್ಪಷ್ಟಪಡಿಸಿದರು.

ಇದಕ್ಕೂ ಮುನ್ನ ಉಪ ಮುಖ್ಯಮಂತ್ರಿ ಜಿ. ಪರಮೇಶ್ವರ್ ಕೂಡ ಜಮೀನಿನ ವಿಸ್ತೀರ್ಣದ ಮಿತಿಯಿಲ್ಲದೆ, ಬರಪೀಡಿತ ಅರ್ಹ ಪ್ರತಿಯೊಬ್ಬ ರೈತರಿಗೂ ಕನಿಷ್ಠ 5,000 ರೂಪಾಯಿ ನೆರವು ನೀಡಲಾಗುವುದು ಎಂದು ಹೇಳಿದ್ದರು. ಮೊದಲ ಕಂತಿನಲ್ಲಿ 2,000 ಅಥವಾ 2,500 ಪಡೆದಿರುವ ರೈತರಿಗೆ ಉಳಿದ ಮೊತ್ತವನ್ನು ಮುಂದಿನ ಕಂತುಗಳಲ್ಲಿ ಪಾವತಿಸಲಾಗುವುದು ಎಂದಿದ್ದರು.

ರಾಜ್ಯ ಸರ್ಕಾರ ಅಕ್ಟೋಬರ್ 23ರಂದು ಹೊರಡಿಸಿದ ಆದೇಶದ ಮೂಲಕ ಅರ್ಹ ಪ್ರತಿಯೊಬ್ಬ ರೈತರಿಗೆ ಮೊದಲ ಕಂತಾಗಿ 2,500 ರೂಪಾಯಿ ಬಿಡುಗಡೆ ಮಾಡಲು ಅನುಮೋದನೆ ನೀಡಿತ್ತು. ನವೆಂಬರ್

ಸಮಾಜ ಸೇವಕ ಜಗದೀಶ್ ಪೂಜಾರ್‌ಗೆ 'ಕರುನಾಡ ಸಾಧನಶ್ರೀ' ಪ್ರಶಸ್ತಿ



ಕಂಪ್ಲಿ: ತಾಲ್ಲೂಕಿನ ಕಣವಿತಿಮ್ಮಲಾಪುರ ಗ್ರಾಮದ ಸಮಾಜ ಸೇವಕ ಜಗದೀಶ್ ಪೂಜಾರ್ ಅವರು ಧಾರವಾಡದ 'ನಾಟ್ಯ ಸ್ಫೂರ್ತಿ ಆರ್ಟ್ ಅಂಡ್ ಕಲ್ಚರ್' ಸಂಸ್ಥೆ ನೀಡುವ 'ಕರುನಾಡ ಸಾಧನಶ್ರೀ' ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಜಗದೀಶ್ ಪೂಜಾರ್ ಅವರ ಸುದೀರ್ಘ ಸಮಾಜ ಸೇವೆಯನ್ನು ಗುರುತಿಸಿ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ನವೆಂಬರ್ 15ರಂದು ಧಾರವಾಡದ ಸರ್ಕಾರಿ ನೌಕರರ ಭವನದಲ್ಲಿ ನಡೆಯಲಿರುವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಗುವುದು ಎಂದು ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಸದಾನಂದ ಸ.ವ. ಬಂಗೆಣ್ಣನವರ್ ತಿಳಿಸಿದ್ದಾರೆ.

ವೇಶ್ಯಾವಾಟಿಕೆ, ಬ್ಲ್ಯಾಕ್‌ಮೇಲ್ ಜಾಲ ಪತ್ತೆ: ಅಪ್ರಾಪ್ತೆಯರ ವಿಡಿಯೋ ಹರಿಬಿಡುವ ಬೆದರಿಕೆ ಆರೋಪ; 17 ಜನರ ವಿರುದ್ಧ ಎಫ್‌ಐಆರ್

ಬಳ್ಳಾರಿ: ಅಪ್ರಾಪ್ತ ಹೆಣ್ಣುಮಕ್ಕಳ ಬೆತ್ತಲೆ ಫೋಟೋ ಹಾಗೂ ಅಶ್ಲೀಲ ವಿಡಿಯೋಗಳನ್ನು ಸೆರೆಹಿಡಿದು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡುವುದಾಗಿ ಬೆದರಿಸಿ, ವೇಶ್ಯಾವಾಟಿಕೆ ಹಾಗೂ ಬ್ಲ್ಯಾಕ್‌ಮೇಲ್ ನಡೆಸುತ್ತಿದ್ದ ಜಾಲವನ್ನು ಪೊಲೀಸರು ಪತ್ತೆ ಹಚ್ಚಿದ್ದಾರೆ.

ನಗರದ ಎಪಿಎಂಸಿ ಯಾರ್ಡ್ ಪೊಲೀಸ್ ಠಾಣೆಯಲ್ಲಿ ಗೋವಿಂದಮ್ಮ, ನಾಗರಾಜು, ರಾಜು, ಎಲ್ಲಿಸ್ವಾಮಿ, ಈರಮ್ಮ, ಮಹಮ್ಮದ್, ವಿನೋತ್‌ಬಾಬು, ರಾಧಿಯಾ, ಗೌಸಿಯಾ, ಗಂಗಾಧರ, ಅನ್ವರ್, ಉಸ್ಮಾನ್, ರಾಹುಲ್, ಅಲಿಜ್, ಅಶ್ರಫ್, ಅನಂತಪುರದ ಬಾಬುರಾವ್ ಸೇರಿದಂತೆ ಒಟ್ಟು 17 ಜನರ ವಿರುದ್ಧ ಮಂಗಳವಾರ ದೂರು ದಾಖಲಾಗಿದೆ. ಆರೋಪಿಗಳು ಅಪ್ರಾಪ್ತ ಹೆಣ್ಣುಮಕ್ಕಳಿಗೆ ಹಣದ ಆಮಿಷ ಒಡ್ಡಿ ಅವರ ಅಶ್ಲೀಲ ಫೋಟೋ ಹಾಗೂ ವಿಡಿಯೋಗಳನ್ನು ಚಿತ್ರೀಕರಿಸಿಕೊಳ್ಳುತ್ತಿದ್ದರು. ಅವುಗಳನ್ನು ಜಾಲತಾಣಗಳಲ್ಲಿ ಹಂಚಿಕೊಳ್ಳುವುದಾಗಿ ಹೆದರಿಸಿ ಬ್ಲ್ಯಾಕ್‌ಮೇಲ್ ಮಾಡುತ್ತಿದ್ದರು. ಅಪ್ರಾಪ್ತೆಯರನ್ನು ಬೆಂಗಳೂರು, ಅನಂತಪುರ, ಬಿಜಾಪುರ ಸೇರಿದಂತೆ ವಿವಿಧ ನಗರಗಳಿಗೆ ಕರೆದೊಯ್ದು ಬಲವಂತವಾಗಿ ವೇಶ್ಯಾವಾಟಿಕೆ ದಂಧೆಗೆ ತಳ್ಳುತ್ತಿದ್ದರು ಎಂದು ದೂರಿನಲ್ಲಿ ತಿಳಿಸಲಾಗಿದೆ.

ಪೊಲೀಸ್ ತನಿಖೆ ಚುರುಕು: ದೂರಿನ ಆಧಾರದ ಮೇಲೆ ಎಪಿಎಂಸಿ ಯಾರ್ಡ್ ಠಾಣೆ ಪೊಲೀಸರು ವಿವಿಧ ಕಾಯ್ದೆಗಳ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಬಳ್ಳಾರಿ ನಗರ ಉಪ-ವಿಭಾಗದ ಡಿವೈಎಸ್‌ಪಿ ಹಾಗೂ ಎಪಿಎಂಸಿ ಯಾರ್ಡ್ ಠಾಣೆಯ ಇನ್‌ಸ್ಪೆಕ್ಟರ್ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ತನಿಖೆ ಚುರುಕುಗೊಳಿಸಿದ್ದಾರೆ.

ಘನ ವಾಹನ ಸಂಚಾರಕ್ಕೆ ಹೊಸ ಮಾರ್ಗಸೂಚಿ ಹೊರಡಿಸಿದ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್

ಬಳ್ಳಾರಿ: ನಗರದಲ್ಲಿ ಸುಗಮ ಹಾಗೂ ಸುರಕ್ಷಿತ ಸಂಚಾರ ವ್ಯವಸ್ಥೆ ಕಲ್ಪಿಸುವ ಉದ್ದೇಶದಿಂದ ಘನ ವಾಹನಗಳ ಸಂಚಾರ-ಕ್ಕೆ ಸಂಬಂಧಿಸಿದಂತೆ ಹೊಸ ಪರಿಷ್ಕೃತ ಮಾರ್ಗಗಳು ಮತ್ತು ಸಮಯದ ನಿರ್ಬಂಧಗಳನ್ನು ನಿಗದಿಪಡಿಸಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕೆ. ಆದೇಶ ಹೊರಡಿಸಿದ್ದಾರೆ.

ಬಳ್ಳಾರಿ ನಗರ ವ್ಯಾಪ್ತಿಯಲ್ಲಿ 2026ರ ಜನವರಿಯಿಂದ ಅಕ್ಟೋಬರ್ ಅಂತ್ಯದವರೆಗೆ ಒಟ್ಟು 121 ರಸ್ತೆ ಅಪಘಾತಗಳು ಸಂಭವಿಸಿದ್ದು, ಈ ಅಪಘಾತಗಳಲ್ಲಿ 44 ಮಂದಿ ಪ್ರಾಣ ಕಳೆದುಕೊಂಡಿದ್ದಾರೆ.

ಈ ಕುರಿತು ಜಿಲ್ಲಾ ಪೊಲೀಸ್ ಅಧೀಕ್ಷಕರು ಸಲ್ಲಿಸಿದ ವರದಿಯ ಆಧಾರದ ಮೇಲೆ, ಈ ಹಿಂದೆ ಜಾರಿಯಲ್ಲಿದ್ದ 2023ರ ಡಿಸೆಂಬರ್ 19 ಹಾಗೂ 2026ರ ಜೂನ್ 16ರ ಅಧಿಸೂಚನೆಗಳನ್ನು ಹಿಂಪಡೆದು ಈ ಹೊಸ ಪರಿಷ್ಕೃತ ಆದೇಶವನ್ನು ಹೊರಡಿಸಲಾಗಿದೆ ಎಂದು ತಿಳಿಸಿದ್ದಾರೆ.

ಪರಿಷ್ಕೃತ ಸಂಚಾರ ಮಾರ್ಗಗಳು: ಹೊಸ ಆದೇಶದಂತೆ ತೋರಣಗಲ್ಲು ಹಾಗೂ ಕುಡತಿನಿ ಕಡೆಯಿಂದ ಸಿರುಗುಪ್ಪ ಕಡೆಗೆ ಸಂಚರಿಸುವ ಲಾರಿಗಳು ಹೊಸಪೇಟೆ ರಸ್ತೆ ಬೈಪಾಸ್, ಹಲಕುಂದಿ ಬೈಪಾಸ್, ಎಪಿಎಂಸಿ ಸರ್ಕಲ್, ಮೋತಿ ಸರ್ಕಲ್, ಅಂಬೇಡ್ಕರ್ ಸರ್ಕಲ್, ವಾಲ್ಮೀಕಿ ಸರ್ಕಲ್ ಹಾಗೂ ಹವಂಬಾವಿ ಮಾರ್ಗವಾಗಿ ಸಾಗಬೇಕು. ಹಾಗೆಯೇ ಮೋಕಾ ಮತ್ತು ಆಲೂರು ಕಡೆಯಿಂದ ಸಿರುಗುಪ್ಪ ಕಡೆಗೆ ತೆರಳುವ ವಾಹನಗಳು ಕೆಇಬಿ, ಸಂಗಂ ಸರ್ಕಲ್, ಅನಂತಪುರ ಬೈಪಾಸ್, ಹಲಕುಂದಿ ಬೈಪಾಸ್, ಎಪಿಎಂಸಿ ಸರ್ಕಲ್, ಮೋತಿ ಸರ್ಕಲ್, ಅಂಬೇಡ್ಕರ್ ಸರ್ಕಲ್, ವಾಲ್ಮೀಕಿ ಸರ್ಕಲ್ ಮತ್ತು ಹವಂಬಾವಿ ಮುಖಾಂತರ ಚಲಿಸಬೇಕಿದೆ. ಇನ್ನು ಬೆಂಗಳೂರು ಹಾಗೂ ಚಳ್ಳಕೆರೆ ಕಡೆಯಿಂದ ಬಂದು ಅನಂತಪುರ ಮತ್ತು ತೋರಣಗಲ್ಲು ಕಡೆಗೆ ತೆರಳುವ ಲಾರಿಗಳು ಎನ್‌ಎಚ್-67 ಅಂಕೋಲ-ಗುತ್ತಿ ಬೈಪಾಸ್ ರಸ್ತೆ ಹಾಗೂ ಹೊಸಪೇಟೆ ಬೈಪಾಸ್ ರಸ್ತೆ



ಮೂಲಕವೇ ಸಂಚರಿಸಲು ಸೂಚಿಸಲಾಗಿದೆ.

ಸಮಯ ಮತ್ತು ವೇಗಮಿತಿ ನಿಯಮಗಳು: ಭಾರಿ ವಾಹನಗಳ ನಗರ ಪ್ರವೇಶಕ್ಕೆ ಕಟ್ಟುನಿಟ್ಟಿನ ಸಮಯ ನಿಗದಿಪಡಿಸಲಾಗಿದೆ. ಲಾರಿಗಳಿಗೆ ಬೆಂಗಳೂರು ಮತ್ತು ಸಿರುಗುಪ್ಪ ರಸ್ತೆಗಳ ನಡುವೆ ಮಧ್ಯಾಹ್ನ 12 ರಿಂದ 3 ಗಂಟೆಯೊಳಗೆ ಮಾತ್ರ ನಗರದೊಳಗೆ ಸಂಚರಿಸಲು ಅವಕಾಶ ನೀಡಲಾಗಿದೆ. ಸಿಮೆಂಟ್, ಕಲ್ಲುಬಂಡೆ, ಜೆಲ್ಲಿ, ಮರಳು, ಗರುಸು, ಡಾಂಬರ್, ಎಂ-ಸ್ಯಾಂಡ್ ಹಾಗೂ ಗಣಿ ಸಾಮಗ್ರಿಗಳನ್ನು ಸಾಗಿಸುವ ಟಿಪ್ಪರ್ ಲಾರಿಗಳಿಗೆ ರಾತ್ರಿ 11 ರಿಂದ ಬೆಳಿಗ್ಗೆ 6 ಗಂಟೆಯವರೆಗೆ ಮಾತ್ರ ನಗರ ಪ್ರವೇಶಕ್ಕೆ ಅನುಮತಿ ಇರುತ್ತದೆ. ಜೊತೆಗೆ ನಗರ ವ್ಯಾಪ್ತಿಯಲ್ಲಿ ಸಂಚರಿಸುವ ಭಾರಿ ವಾಹನಗಳು (ಊಟುಗಿ) ಗಂಟೆಗೆ ಗರಿಷ್ಠ 30 ಕಿ.ಮೀ. ವೇಗಮಿತಿಯಲ್ಲಿ ಮಾತ್ರ ಚಲಿಸಬೇಕು ಎಂದು ಸೂಚಿಸಿದ್ದಾರೆ.

ಅಗತ್ಯ ವಸ್ತುಗಳ ಅಧಿನಿಯಮ 1955ರನ್ವಯ ವೈದ್ಯಕೀಯ ಸಾಮಗ್ರಿಗಳು, ಔಷಧಿಗಳು, ಹಣ್ಣು, ತರಕಾರಿ, ಹಾಲು, ಇಂಧನ, ರಸಗೊಬ್ಬರ, ಅಡುಗೆ ಅನಿಲ , ಪಡಿತರ ಅಕ್ಕಿ, ಪೋಸ್ಟಲ್ ಹಾಗೂ ಕೊರಿಯರ್ ವಾಹನಗಳು ಮತ್ತು ಕೃಷಿ ಉತ್ಪನ್ನಗಳನ್ನು ಸಾಗಿಸುವ ವಾಹನಗಳ ನಗರ ಪ್ರವೇಶಕ್ಕೆ ಯಾವುದೇ ರೀತಿಯ ನಿರ್ಬಂಧವಿರುವುದಿಲ್ಲ ಎಂದು ಆದೇಶದಲ್ಲಿ ಸ್ಪಷ್ಟಪಡಿಸಿದ್ದಾರೆ.

ಟಿಪ್ಪು ಸುಲ್ತಾನ್ ಜಯಂತಿ ಆಚರಣೆ



ಸಿರುಗುಪ್ಪ: ನಗರದಲ್ಲಿ ಹಝರತ್ ಟಿಪ್ಪು ಸುಲ್ತಾನ್ ಸಂಘದ ವತಿಯಿಂದ ಮೈಸೂರು ಹುಲಿ ಟಿಪ್ಪು ಸುಲ್ತಾನ್ ಜಯಂತಿಯನ್ನು ಮಂಗಳವಾರ ಸಂಭ್ರಮದಿಂದ ಆಚರಿಸಲಾಯಿತು.

ಈ ವೇಳೆ ಸಂಘದ ಅಧ್ಯಕ್ಷ ಹಮೀದ್ ಸಾಬ್ ಮಾತನಾಡಿ, ಟಿಪ್ಪು ಸುಲ್ತಾನ್ ಅವರು ಬ್ರಿಟಿಷರ ಆಕ್ರಮಣದ ವಿರುದ್ಧ ಧೈರ್ಯದಿಂದ ಹೋರಾಡಿದ ಮಹಾನ್ ದೇಶಪ್ರೇಮಿಯಾಗಿದ್ದರು.

ಅವರ ಹೋರಾಟ, ತ್ಯಾಗ ಮತ್ತು ಸ್ವಾಭಿಮಾನದ ಇತಿಹಾಸವನ್ನು ಇಂದಿನ ಯುವಪೀಳಿಗೆಗೆ ಪರಿಚಯಿಸುವ ಅಗತ್ಯವಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ರಾಜ್ಯ ಅಲ್ಪಸಂಖ್ಯಾತರ ಅಭಿವೃದ್ಧಿ ಒಕ್ಕೂಟದ ರಾಜ್ಯಾಧ್ಯಕ್ಷ ಖಾಸಿಂ ಸಾಬ್ ಹಳೇಕೋಟೆ, ರಾಜ್ಯ ಉಪಾಧ್ಯಕ್ಷ ಇನಾಯತುಲ್ಲಾ ಜೆ., ಹಾಗೂ ರಾಜ್ಯ ಖಜಾಂಚಿ ಖಾಜಾ ಸಾಬ್, ಸಂಘದ ಪದಾಧಿಕಾರಿಗಳು, ಸದಸ್ಯರು ಹಾಗೂ ನೂರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

ಸಂಡೂರಿನಲ್ಲಿ ಕನ್ನಡ ಸಾಹಿತ್ಯ ಭವನ ಲೋಕಾರ್ಪಣೆ



ಸಂಡೂರು: ಪಟ್ಟಣದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ತಾಲೂಕು ಘಟಕದ ವತಿಯಿಂದ ಆಯೋಜಿಸಿದ್ದ ಕನ್ನಡ ಸಾಹಿತ್ಯ ಮತ್ತು ಸಾಂಸ್ಕೃತಿಕ ಭವನದ ಉದ್ಘಾಟನೆ ಹಾಗೂ ಸಭಾಭವನದ ಶಂಕುಸ್ಥಾಪನೆ ಸಮಾರಂಭ ನಡೆಯಿತು.

ಸಂಸದ ಈ.ತುಕಾರಾಂ ಮಾತನಾಡಿ ಕಲೆ, ಸಾಹಿತ್ಯ ಹಾಗೂ ಸಂಸ್ಕೃತಿಯ ವಿಚಾರದಲ್ಲಿ ಕರ್ನಾಟಕ ದೇಶದಲ್ಲೇ ಮುಂಚೂಣಿಯಲ್ಲಿದೆ. ಸಂಡೂರು ತನ್ನ ವಿಶಿಷ್ಟ ಸಂಸ್ಕಾರ ಮತ್ತು ಸಾಂಸ್ಕೃತಿಕ ಪರಂಪರೆಯಿಂದ ಗುರುತಿಸಿಕೊಂಡಿದೆ. ಸಭಾಭವನದ ಮೇಲ್ಚಾವಣಿ ನಿರ್ಮಾಣಕ್ಕೆ ಸಿಎಂಐಡಿಪಿ ಹಾಗೂ ಶಾಸಕರ ಅನುದಾನದಡಿ ಹೆಚ್ಚುವರಿಯಾಗಿ 1.25 ಕೋಟಿ ನೀಡಲಾಗುವುದು ಎಂದು ಘೋಷಿಸಿದರು.

ಸಂಡೂರು ಶಾಸಕಿ ಅನ್ನಪೂರ್ಣ ಈ. ತುಕಾರಾಂ ಮಾತನಾಡಿ, ಈ ಭವನ ಕೇವಲ ಇಟ್ಟಿಗೆ-ಸಿಮೆಂಟ್‌ನ ಕಟ್ಟಡವಾಗದೆ ನಾಡಿನ ಸಂಸ್ಕೃತಿ, ಜಾನಪದ, ನಾಟಕ ಹಾಗೂ ಸಾಹಿತ್ಯ ಚಟುವಟಿಕೆಗಳ ನಿರಂತರ ಕೇಂದ್ರವಾಗಬೇಕು. ಆಧುನಿಕ ಯುಗದಲ್ಲಿ ಯುವಕರು ಮತ್ತು ಮಕ್ಕಳಲ್ಲಿ ಕನ್ನಡ ಪುಸ್ತಕ ಓದುವ ಹಾಗೂ ಬರೆಯುವ ಹವ್ಯಾಸ ಬೆಳೆಸಲು ಇದು ನೆರವಾಗಬೇಕು. ಕ್ಷೇತ್ರದಲ್ಲಾಗುವ ಕನ್ನಡಪರ ಕಾರ್ಯಕ್ರಮಗಳಿಗೆ ಹಾಗೂ ಭವನದ ಮುಂದಿನ ಅಭಿವೃದ್ಧಿಗೆ ಸಂಪೂರ್ಣ ಸಹಕಾರ ನೀಡಲಾಗುವುದು ಎಂದು ಭರವಸೆ ನೀಡಿದರು.

ಸಂಡೂರು ವಿರಕ್ತಮಠದ ಪ್ರಭು ಮಹಾಸ್ವಾಮಿಜೀ ಆಶೀರ್ವಚನ ನೀಡಿದರು. ಸಮಾರಂಭದಲ್ಲಿ ಕಸಾಪ ಜಿಲ್ಲಾಧ್ಯಕ್ಷ ಡಾ.ನಿಷ್ಠಿ ರುದ್ರಪ್ಪ, ಬಿಇಒ ಡಾ.ಐ.ಆರ್. ಅಕ್ಕಿ, ನಾಡೋಜ ಚಿತ್ರಕಲಾವಿದ ವಿ.ಟಿ.ಕಾಳೆ, ಸಿ.ಎಂ.ಶಿಗ್ಗಾವಿ, ಡಾ.ವೃಷಬೇಂದ್ರ ಆಚಾರ್, ಡಾ.ವಸುಂಧರಾ ಭೂಪತಿ, ಡಾ.ಚಂದ್ರಕಾಂತ್ ವಡ್ಡು, ಶಂಕ್ರಪ್ಪ ತೋರಣಗಲ್ಲು, ತುಮಟಿ ಲಕ್ಷ್ಮಣ, ಬಿ.ಆರ್.ಮಸೂತಿ, ಮಹಮ್ಮದ್ ಅಯೂಬ್, ಡಾ.ಪಿ.ಹುಚ್ಚುಸಾಬ್, ಪ್ರಕಾಶ್ ಮೂರ್ತಿ, ಡಾ.ಕೆ.ಶಿವಲಿಂಗಪ್ಪ ಹಂದಿಹಾಳ್, ಡಾ.ಮೃತ್ಯುಂಜಯ ರುಮಾಲೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಭೀಕರ ರಸ್ತೆ ಅಪಘಾತ: ಒಂದೂವರೆ ವರ್ಷದ ಮಗು ಸೇರಿ ಮೂವರು ಸ್ಥಳದಲ್ಲೇ ಸಾವು, ಇಬ್ಬರಿಗೆ ಗಂಭೀರ ಗಾಯ

ಬಳ್ಳಾರಿ: ಬೈಕ್‌ಗೆ ಹಿಂಬದಿಯಿಂದ ಕಾರು ಡಿಕ್ಕಿ ಹೊಡೆದ ಪರಿಣಾಮ ಒಂದೂವರೆ ವರ್ಷದ ಮಗು ಸೇರಿ ಮೂವರು ಸ್ಥಳದಲ್ಲೇ ಸಾವನ್ನಪ್ಪಿ ಇಬ್ಬರು ಗಂಭೀರವಾಗಿ ಗಾಯಗೊಂಡಿರುವ ಭೀಕರ ಘಟನೆ ವಿಜಯನಗರ ಜಿಲ್ಲೆಯ ಹೊಸಪೇಟೆ ತಾಲೂಕಿನ ಧರ್ಮಸಾಗರ ಗ್ರಾಮದ ಬಳಿಯ ರಾಷ್ಟ್ರೀಯ ಹೆದ್ದಾರಿ 67ರಲ್ಲಿ ನಡೆದಿದೆ.

ಬಳ್ಳಾರಿ ಜಿಲ್ಲೆಯ ಕಂಪ್ಲಿ ತಾಲೂಕಿನ ಮೆಟ್ರಿ ಗ್ರಾಮದ ನಿವಾಸಿಗಳಾದ ತಾಯಮ್ಮ (55), ಜ್ಯೋತಿ (28) ಹಾಗೂ ಒಂದೂವರೆ ವರ್ಷದ ಮಗು ದಿವ್ಯ ಮೃತ ದುರ್ದೈವಿಗಳು. ಅಪಘಾತದಲ್ಲಿ ಲಕ್ಷ್ಮಣ್ ಹಾಗೂ ಅವರ ಪುತ್ರಿ ಸೃಷ್ಟಿ ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ಮೆಟ್ರಿ ಗ್ರಾಮದ ಲಕ್ಷ್ಮಣ್ ಅವರ ಕುಟುಂಬದವರು ಹೊಸಪೇಟೆ ತಾಲೂಕಿನ ಕೊಟಗಿನಾಳ್ ಗ್ರಾಮದಲ್ಲಿ ನಡೆದ ಶುಭಕಾರ್ಯದಲ್ಲಿ ಭಾಗವಹಿಸಿದ್ದರು. ಕಾರ್ಯಕ್ರಮ ಮುಗಿಸಿ, ಇಬ್ಬರು ಮಕ್ಕಳು ಸೇರಿ ಐದು ಜನರು ಒಂದೇ ಬೈಕ್‌ನಲ್ಲಿ ಮೆಟ್ರಿ ಗ್ರಾಮಕ್ಕೆ ವಾಪಸ್ಸಾಗುತ್ತಿದ್ದರು. ಈ ವೇಳೆ ಧರ್ಮಸಾಗರ



ಗ್ರಾಮದ ಬಳಿ ವೇಗವಾಗಿ ಬಂದ ಕಾರು ಬೈಕ್‌ಗೆ ಹಿಂಬದಿಯಿಂದ ಡಿಕ್ಕಿ ಹೊಡೆದ ಪರಿಣಾಮ ಈ ದುರಂತ ಸಂಭವಿಸಿದೆ.

ಘಟನಾ ಸ್ಥಳಕ್ಕೆ ಹೊಸಪೇಟೆ ಗ್ರಾಮೀಣ ಪೊಲೀಸ್ ಠಾಣೆಯ ಪಿಐ ಗುರುರಾಜ್ ಕಟ್ಟಿಮನಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹಗಳನ್ನು ಹೊಸಪೇಟೆಯ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದ್ದು, ಈ ಸಂಬಂಧ ಹೊಸಪೇಟೆ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಲಾರಿ ಹರಿದು 80ಕ್ಕೂ ಹೆಚ್ಚು ಕುರಿಗಳು ಸಾವು



ಬಳ್ಳಾರಿ: ರಸ್ತೆಬದಿಯಲ್ಲಿ ಸಾಗುತ್ತಿದ್ದ ಕುರಿ ಹಿಂಡಿನ ಮೇಲೆ ಸಿಮೆಂಟ್ ತುಂಬಿದ್ದ ಲಾರಿ ಹರಿದ ಪರಿಣಾಮ 80ಕ್ಕೂ ಹೆಚ್ಚು ಕುರಿಗಳು ಸಾವನ್ನಪ್ಪಿರುವ ಘಟನೆ ಬಳ್ಳಾರಿ ತಾಲೂಕಿನ ಕಾರೆಕಲ್ ಗ್ರಾಮದ ಬಳಿ ನಡೆದಿದೆ.

ಕುರಿಗಾಯಿ ಸಿಂದವಾಳ ವೀರಭದ್ರಪ್ಪ ಅವರಿಗೆ ಸೇರಿದ ಕುರಿಗಳು ಮೃತಪಟ್ಟಿದ್ದು, ಲಕ್ಷಾಂತರ ರೂಪಾಯಿ ನಷ್ಟವಾಗಿದೆ.

ಸಿಂದವಾಳ ವೀರಭದ್ರಪ್ಪ ಅವರು ಎಂದಿನಂತೆ ಕುರಿಗಳನ್ನು ಮೇಯಿಸಲು ರಸ್ತೆಬದಿಯಲ್ಲಿ ಹಿಂಡಿನೊಂದಿಗೆ ತೆರಳುತ್ತಿದ್ದರು. ಈ ವೇಳೆ ತೆಲಂಗಾಣದಿಂದ ಬಳ್ಳಾರಿ ಕಡೆಗೆ ಬರುತ್ತಿದ್ದ ಸಿಮೆಂಟ್ ಲಾರಿ ಏಕಾಏಕಿ ಕುರಿಗಳ ಮೇಲೆ ಹರಿದಿದೆ. ಪರಿಣಾಮ ಕುರಿಗಳು ರಸ್ತೆಯುದ್ದಕ್ಕೂ ಚೆಲ್ಲಾಪಿಲ್ಲಿಯಾಗಿ ಬಿದ್ದು ಸಾವನ್ನಪ್ಪಿವೆ.ಕುರಿ ಸಾಕಾಣಿಕೆಯನ್ನೇ ಜೀವನಾಧಾರವಾಗಿಸಿಕೊಂಡಿದ್ದ ವೀರಭದ್ರಪ್ಪ ಅವರು ಒಂದೇ ಅಪಘಾತದಲ್ಲಿ 80ಕ್ಕೂ ಹೆಚ್ಚು ಕುರಿಗಳನ್ನು ಕಳೆದುಕೊಂಡಿದ್ದಾರೆ. ಜೀವನಕ್ಕೆ ಆಸರೆಯಾಗಿದ್ದ ಕುರಿಗಳ ಸಾವಿನಿಂದ ಕುರಿಗಾಯಿ ಕಂಗಾಲಾಗಿದ್ದು, ಕಣ್ಣೀರು ಹಾಕುತ್ತಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಜಮ್ಮು-ಕಾಶ್ಮೀರದ ಕಿಶ್ತ್ವಾರ್ ಅರಣ್ಯದಲ್ಲಿ ಗುಂಡಿನ ಸದ್ದು; ಇಬ್ಬರು ವಿಶೇಷ ಪೊಲೀಸ್ ಅಧಿಕಾರಿಗಳು ನಾಪತ್ತೆ

ಶ್ರೀನಗರ: ಜಮ್ಮು-ಕಾಶ್ಮೀರದ ಕಿಶ್ತ್ವಾರ್ ಜಿಲ್ಲೆಯ ಮಾರ್ವಾಹ್‌ನ ದೆಹರ್ನಾ ಅರಣ್ಯ ಪ್ರದೇಶದಲ್ಲಿ ಬುಧವಾರ ಮಧ್ಯಾಹ್ನ ಗುಂಡಿನ ಸದ್ದು ಕೇಳಿಬಂದಿದ್ದು, ಇಬ್ಬರು ವಿಶೇಷ ಪೊಲೀಸ್ ಅಧಿಕಾರಿಗಳು ನಾಪತ್ತೆಯಾಗಿದ್ದಾರೆ ಎಂದು ವರದಿಯಾಗಿದೆ.

ಪ್ರಾಥಮಿಕ ಮಾಹಿತಿಯ ಪ್ರಕಾರ, ನಾಪತ್ತೆಯಾಗಿರುವ ಸಿಬ್ಬಂದಿಯನ್ನು ರಿಷಿಪಾಲ್ ಮತ್ತು ಬಾಬಿ ಚಂದ್ ಎಂದು ಗುರುತಿಸಲಾಗಿದೆ. ಇವರು ವಿಶೇಷ ಕಾರ್ಯಾಚರಣೆ ತಂಡದ ಭಾಗವಾಗಿದ್ದರು. ಅಪ್ಪರ್ ರಿಡ್ಜ್ ದೆಹರ್ನಾದ ಇಂದರ್‌ವಾನ್ ಪ್ರದೇಶದ



ಬಸ್ನಾನ್‌ನಲ್ಲಿ ನಿಯೋಜಿಸಲಾಗಿದ್ದ ಸೇನೆಯ 17ನೇ ರಾಷ್ಟ್ರೀಯ ರೈಫಲ್ಸ್ ತಂಡದ ಸಿಬ್ಬಂದಿಯ ಕರ್ತವ್ಯ ಬದಲಾವಣೆಗಾಗಿ ಈ ಇಬ್ಬರು ಅಧಿಕಾರಿಗಳು ಕಿಯಾರ್ ದಚನ್‌ನಿಂದ ಪ್ರಯಾಣಿಸುತ್ತಿದ್ದರು.

ಬುಧವಾರ ಮಧ್ಯಾಹ್ನ ಸುಮಾರು 3:30ರ ವೇಳೆಗೆ ಇಬ್ಬರು ಸಿಬ್ಬಂದಿ ಪ್ರಯಾಣಿಸುತ್ತಿದ್ದಾಗ ಅರಣ್ಯ ಪ್ರದೇಶದಲ್ಲಿ ಗುಂಡಿನ ಸದ್ದು ಕೇಳಿಬಂದಿದೆ. ಇದೇ ಸಮಯದಲ್ಲಿ ಮಾರ್ವಾಹ್ ಪ್ರದೇಶದಲ್ಲಿ ಏರ್‌ಟೆಲ್ ಮೊಬೈಲ್ ನೆಟ್‌ವರ್ಕ್ ಸೇವೆಯಲ್ಲೂ ವ್ಯತ್ಯಯ ಉಂಟಾಗಿದೆ. ಸಂಜೆ ಸುಮಾರು 7 ಗಂಟೆಗೆ ಎಸ್‌ಹೆಚ್‌ಓ (ಸ್ಟೇಷನ್ ಹೌಸ್ ಆಫೀಸರ್) ನೇತೃತ್ವದಲ್ಲಿ ಎಸ್‌ಒಜಿ ತಂಡವೊಂದು ಅಗತ್ಯ ಕ್ರಮ ಕೈಗೊಳ್ಳಲು ಘಟನಾ ಪ್ರದೇಶದತ್ತ ತೆರಳಿದೆ. ಈ ಘಟನೆಗೆ ಸಂಬಂಧಿಸಿದಂತೆ ಹೆಚ್ಚಿನ ವಿವರಗಳು ಇನ್ನಷ್ಟೇ ಲಭ್ಯವಾಗಬೇಕಿದೆ.

ಗಜೇಂದ್ರಗಡದಲ್ಲಿ ಪಟಾಕಿ ಕಿಡಿ ಸಿಡಿದು ಗೊಡೌನ್‌ಗೆ ಬೆಂಕಿ; ಲಕ್ಷಾಂತರ ಮೌಲ್ಯದ ಸಾಮಗ್ರಿಗಳು ಬೆಂಕಿಗಾಹುತಿ

ಗದಗ: ಪಟಾಕಿ ಕಿಡಿ ಸಿಡಿದು ಪ್ಲಾಸ್ಟಿಕ್ ಪೈಪ್ ಕಿರಾಣಿ ಸಾಮಗ್ರಿಗಳನ್ನು ಸಂಗ್ರಹಿಸಿಟ್ಟಿದ್ದ ಗೊಡೌನ್‌ಗೆ ಬೆಂಕಿ ತಗುಲಿ ಅಪಾರ ಪ್ರಮಾಣದ ಸಾಮಗ್ರಿಗಳು ಬೆಂಕಿಗಾಹುತಿಯಾದ ಘಟನೆ ಗದಗ ಜಿಲ್ಲೆಯ ಗಜೇಂದ್ರಗಡ ಪಟ್ಟಣದಲ್ಲಿ ನಡೆದಿದೆ.

ಪ

ನಗರ ಶಾಖಾ ಗ್ರಂಥಾಲಯಗಳ ಅಭಿವೃದ್ಧಿಗೆ ಕ್ರಮ: ಪಿ. ಗಾದೆಪ್ಪ



ಬಳ್ಳಾರಿ : ನಗರದ ವಿವಿಧ ವಾರ್ಡ್ಗಳಲ್ಲಿರುವ ಶಾಖಾ ಗ್ರಂಥಾಲಯಗಳ ಸ್ಥಿತಿಗತಿಗಳನ್ನು ಪರಿಶೀಲಿಸಿ, ಮೂಲಸೌಕರ್ಯಗಳ ಅಭಿವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳಲು ನಗರ ಕೇಂದ್ರ ಗ್ರಂಥಾಲಯದ ಅಧ್ಯಕ್ಷರು ಹಾಗೂ ಮಹಾನಗರ ಪಾಲಿಕೆಯ ಮಹಾಪೌರರಾದ ಪಿ. ಗಾದೆಪ್ಪ ಅವರ ಅಧ್ಯಕ್ಷತೆಯಲ್ಲಿ ನವೆಂಬರ್ 7ರಂದು ಸಭೆ ನಡೆಯಿತು.

ಸಭೆಯ ಬಳಿಕ ಗ್ರಂಥಾಲಯ ಪ್ರಾಧಿಕಾರದ ಸದಸ್ಯರು ಹಾಗೂ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ನಗರದ ವಿವಿಧ ಶಾಖಾ ಗ್ರಂಥಾಲಯಗಳಿಗೆ ಖುದ್ದಾಗಿ ಭೇಟಿ ನೀಡಿದ ಮಹಾಪೌರರು, ಅಲ್ಲಿನ ಕಟ್ಟಡಗಳ ಸ್ಥಿತಿ, ಶೌಚಾಲಯ, ಕಾಂಪೌಂಡ್ ವ್ಯವಸ್ಥೆ ಹಾಗೂ ಸ್ವಚ್ಛತೆಯನ್ನು ಪರಿಶೀಲಿಸಿದರು.

ವಾರ್ಡ್ ನಂ. 23ರ ಅಂಬೇಡ್ಕರ್ ನಗರದಲ್ಲಿ ಮೇಲ್ಛಾಗದ ಕಟ್ಟಡ ನಿರ್ಮಿಸಿ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ಅಧ್ಯಯನಕ್ಕೆ ಅನುಕೂಲ ಕಲ್ಪಿಸುವ ಕುರಿತು ಚರ್ಚಿಸಲಾಯಿತು. ವಾರ್ಡ್ ನಂ. 1ರ ಕೇಂದ್ರ ಕಾರಾಗೃಹದ ಹಿಂಭಾಗದಲ್ಲಿರುವ ಗ್ರಂಥಾಲಯ ಕಟ್ಟಡದ ಸ್ಥಳದ ಸಮಸ್ಯೆಯನ್ನು ಬಗೆಹರಿಸುವ ಬಗ್ಗೆಯೂ ಸಮಾಲೋಚನೆ ನಡೆಸಲಾಯಿತು.

ಅದೇ ರೀತಿ ವಾರ್ಡ್ ನಂ. 39ರ ಕೋಟೆ ಪ್ರದೇಶದಲ್ಲಿರುವ ಗ್ರಂಥಾಲಯವನ್ನು ಶ್ರೀ ಮೇಧ ಕಾಲೇಜಿನ ವಾಟರ್ ಬೂಸ್ಟರ್ ಕಟ್ಟಡಕ್ಕೆ ಸ್ಥಳಾಂತರಿಸುವ ಪ್ರಸ್ತಾವನೆ ಪರಿಶೀಲಿಸಲಾಯಿತು. ವಾರ್ಡ್ ನಂ. 25ರ ರೇಡಿಯೋ ಪಾರ್ಕ್ ಸಮೀಪದ ಗ್ರಂಥಾಲಯಕ್ಕೆ ಕಾಂಪೌಂಡ್ ವಾಲ್ ನಿರ್ಮಿಸುವುದು ಹಾಗೂ ಪ್ರಸಿದ್ಧ ರೇಡಿಯೋ ಪಾರ್ಕ್ನಲ್ಲಿ ಹಿರಿಯ ನಾಗರಿಕರ ಅನುಕೂಲಕ್ಕಾಗಿ ದಿನಪತ್ರಿಕೆಗಳ ವ್ಯವಸ್ಥೆ ಕಲ್ಪಿಸುವ ಕುರಿತು ಚರ್ಚಿಸಲಾಯಿತು.

ಇದಲ್ಲದೆ ಕುವೆಂಪು ನಗರ ಹಾಗೂ ಬಂಡಿಹಟ್ಟಿ ಶಾಖಾ ಗ್ರಂಥಾಲಯಗಳ ಸ್ಥಳೀಯ ಸಮಸ್ಯೆಗಳನ್ನು ಪರಿಶೀಲಿಸಿ ಸಮಗ್ರ ವರದಿ ಸಿದ್ಧಪಡಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಮುಂದಿನ ಹಂತದಲ್ಲಿ ನಿಯಮಾನುಸಾರ ಅಗತ್ಯ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಸದಸ್ಯರಾದ ಶ್ರೀಮತಿ ಜಾನಕಮ್ಮ, ಶ್ರೀಮತಿ ಕವಿತಾ ಹೊನ್ನಪ್ಪ ಹಾಗೂ ಸಂಬಂಧಪಟ್ಟ ವಾರ್ಡ್ಗಳ ಸದಸ್ಯರಾದ ಶ್ರೀಮತಿ ಶಶಿಕಲಾ, ಜಗನ್ನಾಥ, ಎಂ. ಗೋವಿಂದರಾಜ ಸೇರಿದಂತೆ ಗ್ರಂಥಾಲಯ ಪ್ರಾಧಿಕಾರದ ಸದಸ್ಯರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

ಉಜ್ಜಯಿನಿಯ ಕಟ್ಟಡದಲ್ಲಿ ಭೀಕರ ಅಗ್ನಿ ಅವಘಡ 15 ಮಂದಿ ಸಿಲುಕಿರುವ ಶಂಕೆ



ಭೋಪಾಲ್: ಮಧ್ಯಪ್ರದೇಶದ ಉಜ್ಜಯಿನಿಯಲ್ಲಿ ಬುಧವಾರ ಭಾರೀ ಅಗ್ನಿ ಅವಘಡ ಸಂಭವಿಸಿದೆ. ಕಟ್ಟಡವೊಂದರಲ್ಲಿ ಬೆಂಕಿ ಕಾಣಿಸಿಕೊಂಡ ಪರಿಣಾಮ ಮಹಿಳೆಯರು ಸೇರಿದಂತೆ ಕನಿಷ್ಠ 10ರಿಂದ 15 ಮಂದಿ ಒಳಗೆ ಸಿಲುಕಿಕೊಂಡಿದ್ದಾರೆ. ಈಗಾಗಲೇ ಕೆಲವರನ್ನು ರಕ್ಷಿಸಲಾಗಿದ್ದು, ಉಳಿದವರನ್ನು ಸುರಕ್ಷಿತವಾಗಿ ಹೊರತರಲು ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ. ಘಟನೆ ನಡೆದ ಸ್ಥಳಕ್ಕೆ ಆರು ಅಗ್ನಿಶಾಮಕ ವಾಹನಗಳು ದೌಡಾಯಿಸಿವೆ. ಪುರಸಭೆಯ ಅಗ್ನಿಶಾಮಕ ದಳದ ಸಿಬ್ಬಂದಿ ಕಟ್ಟಡದಲ್ಲಿ ಸಿಲುಕಿರುವವರನ್ನು ರಕ್ಷಿಸುವ ಕಾರ್ಯಾಚರಣೆ ನಡೆಸುತ್ತಿದ್ದಾರೆ. ಇದು ವಸತಿ ಮತ್ತು ವಾಣಿಜ್ಯ ಉದ್ದೇಶಗಳಿಗೆ ಬಳಕೆಯಾಗುತ್ತಿದ್ದ ಕಟ್ಟಡವಾಗಿದೆ.

ನಗರದ ಓಲ್ಡ್ ಕೊತ್ವಾಲಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿರುವ ಬಗಾಡಿಯಾ ಟವರ್‌ನಲ್ಲಿ ಈ ಘಟನೆ ಸಂಭವಿಸಿದೆ ಎಂದು ಪ್ರಾಥಮಿಕ ಮಾಹಿತಿಯಿಂದ ತಿಳಿದುಬಂದಿದೆ. ಪ್ರತ್ಯಕ್ಷದರ್ಶಿಯೊಬ್ಬರ ಪ್ರಕಾರ, ಐದು ಅಂತಸ್ತಿನ ಕಟ್ಟಡದ ಮೂರನೇ ಮಹಡಿಯಲ್ಲಿ 'ಗರುಡ ಪುರಾಣ' ಕಾರ್ಯಕ್ರಮದಲ್ಲಿ ಭಾಗವಹಿಸಲು ಹಲವರು ಸೇರಿದ್ದರು. ಈ ವೇಳೆ ಬೆಂಕಿ ಕಾಣಿಸಿಕೊಂಡಿದೆ. ಅಗ್ನಿಶಾಮಕ ಸಿಬ್ಬಂದಿ ಒದಗಿಸಿದ ಏಣಿಯ ಸಹಾಯದಿಂದ ಕೆಲವರು ಕಟ್ಟಡದಿಂದ ಹೊರಬರುವಲ್ಲಿ ಯಶಸ್ವಿಯಾಗಿದ್ದಾರೆ. ಆದರೆ, ಕೆಲವು ಮಹಿಳೆಯರು ಇನ್ನೂ ಕಟ್ಟಡದೊಳಗೆ ಸಿಲುಕಿಕೊಂಡಿದ್ದು, ಕೆಳಗೆ ಇಳಿಯಲು ಸಾಧ್ಯವಾಗುತ್ತಿಲ್ಲ ಎಂದು ಪ್ರತ್ಯಕ್ಷದರ್ಶಿ ತಿಳಿಸಿದ್ದಾರೆ. ಪುರಸಭೆ ಮತ್ತು ಪೊಲೀಸರು ಜಂಟಿಯಾಗಿ ರಕ್ಷಣಾ ಕಾರ್ಯಾಚರಣೆ ನಡೆಸುತ್ತಿದ್ದಾರೆ. ಬೆಂಕಿ ಕಾಣಿಸಿಕೊಳ್ಳಲು ನಿಖರವಾದ ಕಾರಣ ಇನ್ನೂ ತಿಳಿದುಬಂದಿಲ್ಲ. ಕೆಲವರು ಕಟ್ಟಡದ ಮೇಲಿನ ಮಹಡಿಯಲ್ಲಿ ಇನ್ನೂ ಸಿಲುಕಿಕೊಂಡಿದ್ದಾರೆ.

ಅವರೊಂದಿಗೆ ಪೊಲೀಸ್ ಸಿಬ್ಬಂದಿ ಇದ್ದಾರೆ ಎಂದು ಉಜ್ಜಯಿನಿ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಶರ್ಮಾ ತಿಳಿಸಿದ್ದಾರೆ. ಬೆಂಕಿ ಅವಘಡದ ಮಾಹಿತಿ ಲಭ್ಯವಾಗುತ್ತಿದ್ದಂತೆ ಪೊಲೀಸರು, ಸ್ಥಳೀಯ ಆಡಳಿತ ಹಾಗೂ ರಾಜ್ಯ ವಿಪತ್ತು ನಿರ್ವಹಣಾ ಪಡೆ ತಂಡಗಳು ಸ್ಥಳಕ್ಕೆ ಧಾವಿಸಿವೆ. ಬೆಂಕಿಯನ್ನು ನಿಯಂತ್ರಿಸುವುದು ಮತ್ತು ಕಟ್ಟಡದಲ್ಲಿರುವವರನ್ನು ಸುರಕ್ಷಿತವಾಗಿ ಹೊರತರಲು ಕಾರ್ಯಾಚರಣೆ ನಡೆಸಲಾಗುತ್ತಿದೆ ಎಂದು ಉಜ್ಜಯಿನಿ ಜಿಲ್ಲಾಧಿಕಾರಿ ರೋಷನ್ ಕುಮಾರ್ ಸಿಂಗ್ ಮಾಹಿತಿ ನೀಡಿದ್ದಾರೆ. ಕಟ್ಟಡವು ಕಿರಿದಾದ ಗಲ್ಲಿಯಲ್ಲಿರುವುದರಿಂದ ರಕ್ಷಣಾ ಕಾರ್ಯಾಚರಣೆಗೆ ಅಡ್ಡಿಯಾಗುತ್ತಿದೆ ಎಂದು ಅವರು ಹೇಳಿದ್ದಾರೆ. ಕಟ್ಟಡದಲ್ಲಿ ಔಷಧಾಲಯವಿದ್ದು, ಅಲ್ಲಿಂದಲೇ ಬೆಂಕಿ ಕಾಣಿಸಿಕೊಂಡು ಕ್ರಮೇಣ ಇತರ ಪ್ರದೇಶಗಳಿಗೆ ಹರಡಿರುವ ಸಾಧ್ಯತೆಯಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಶರ್ಮಾ ತಿಳಿಸಿದ್ದಾರೆ.

ಎಚ್‌ಎಲ್‌ಸಿ ಕಾಲುವೆಗೆ ನ.30ರವರೆಗೆ ನೀರು ಹರಿಸಲು ಆಂಧ್ರ ಶಾಸಕ ಕಾಲುವ ಶ್ರೀನಿವಾಸ್‌ಗೆ ರೈತ ಸಂಘದಿಂದ ಮನವಿ



ಬಳ್ಳಾರಿ: ತುಂಗಭದ್ರಾ ಜಲಾಶಯದ ಬಲದಂಡೆಯ ಮೇಲ್ಮಟ್ಟದ ಕಾಲುವೆ (ಎಚ್‌ಎಲ್‌ಸಿ)ಗೆ ನವೆಂಬರ್ 30ರವರೆಗೆ ಹಾಗೂ ಡಿಸೆಂಬರ್ ತಿಂಗಳಲ್ಲಿಯೂ ಆಂಧ್ರಪ್ರದೇಶದ ಪಾಲಿನ ನೀರು ಹರಿಸುವಂತೆ ತುಂಗಭದ್ರಾ ರೈತ ಸಂಘದ ಪದಾಧಿಕಾರಿಗಳು ಆಂಧ್ರಪ್ರದೇಶದ ರಾಯದುರ್ಗ ಕ್ಷೇತ್ರದ ಶಾಸಕ ಹಾಗೂ ಮಾಜಿ ಸಚಿವ ಕಾಲುವ ಶ್ರೀನಿವಾಸ್ ಅವರಿಗೆ ಮನವಿ ಸಲ್ಲಿಸಿದ್ದಾರೆ.

ನಗರದ ಇನ್ಫೆಂಟ್ರಿ ರಸ್ತೆಯಲ್ಲಿ ಖಾಸಗಿ ಕಾರ್ಯಕ್ರಮವೊಂದರ ಉದ್ಘಾಟನೆಗೆ ಆಗಮಿಸಿದ್ದ ಶಾಸಕ ಕಾಲುವ ಶ್ರೀನಿವಾಸ್ ಅವರನ್ನು ತುಂಗಭದ್ರಾ ರೈತ ಸಂಘದ ಅಧ್ಯಕ್ಷ ದರೂರು ಪುರುಷೋತ್ತಮಗೌಡ ನೇತೃತ್ವದ ನಿಯೋಗ ಭೇಟಿ ಮಾಡಿ ಮನವಿ ಸಲ್ಲಿಸಿತು.

ಈ ಸಂದರ್ಭದಲ್ಲಿ ತುಂಗಭದ್ರಾ ಜಲಾಶಯದ ನೀರಿನ ಹಂಚಿಕೆ ಹಾಗೂ ಎಚ್‌ಎಲ್‌ಸಿ ಕಾಲುವೆಗೆ ನೀರು ಹರಿಸುವ ಅವಧಿಯನ್ನು ವಿಸ್ತರಿಸುವ ಕುರಿತು ಚರ್ಚಿಸಲಾಯಿತು.

ಎಚ್‌ಎಲ್‌ಸಿ ಕಾಲುವೆ ವ್ಯಾಪ್ತಿಯ ರೈತರು ಕೃಷಿ ಚಟುವಟಿಕೆಗಳಿಗೆ ತುಂಗಭದ್ರಾ ಜಲಾಶಯದ ನೀರನ್ನು ಅವಲಂಬಿಸಿದ್ದಾರೆ. ಬೆಳೆಗಳಿಗೆ ಅಗತ್ಯವಿರುವ ನೀರು ಸಮರ್ಪಕವಾಗಿ ದೊರೆಯದಿದ್ದರೆ ರೈತರಿಗೆ ತೊಂದರೆಯಾಗಲಿದೆ. ಆದ್ದರಿಂದ ಆಂಧ್ರಪ್ರದೇಶದ ಪಾಲಿನ ನೀರನ್ನು ನವೆಂಬರ್ 30ರವರೆಗೆ ಹಾಗೂ ಡಿಸೆಂಬರ್ ತಿಂಗಳಲ್ಲಿಯೂ ಮುಂದುವರಿಸಿ ಹರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ರೈತ ಸಂಘದ ಪದಾಧಿಕಾರಿಗಳು ಮನವಿ ಮಾಡಿದರು.

ರೈತ ಸಂಘದ ಮನವಿಗೆ ಸ್ಪಂದಿಸಿದ ಶಾಸಕ ಕಾಲುವ ಶ್ರೀನಿವಾಸ್, ಈ ಕುರಿತು ಬಳ್ಳಾರಿ ಜಿಲ್ಲೆಯ ಶಾಸಕರು ಹಾಗೂ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಲಾಗುವುದು. ಎರಡೂ ರಾಜ್ಯಗಳ ಪಾಲಿನ ನೀರು ಸಮರ್ಪಕವಾಗಿ ದೊರೆಯುವಂತೆ ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ತುಂಗಭದ್ರಾ ರೈತ ಸಂಘದ ಸದಸ್ಯರಾದ ತಿಮ್ಮರಾಜು, ಕೃಷ್ಣನಗರ ಕ್ಯಾಂಪ್‌ನ ಶಿವಯ್ಯ, ಗಂಗಾವತಿಯ ವೀರೇಶ್, ಕೃಷ್ಣನಗರ ಕ್ಯಾಂಪ್‌ನ ಬಲರಾಮ, ಕಂಪ್ಲಿಯ ಸತ್ಯನಾರಾಯಣ, ಕೃಷ್ಣನಗರ ಕ್ಯಾಂಪ್‌ನ ರಾಮಕೃಷ್ಣ ಹಾಗೂ ಜಾಲಿಹಾಳ್‌ನ ಶ್ರೀಧರ್ ಗೌಡ ಸೇರಿದಂತೆ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಸಾವಯವ ಉತ್ಪನ್ನಗಳ ರೈತ ಸಂತೆಗೆ ಗ್ರಾಹಕರಿಂದ ಉತ್ತಮ ಸ್ಪಂದನೆ



ಬಳ್ಳಾರಿ: ನಗರದ ಗಾಂಧಿ ಭವನದಲ್ಲಿ ಪ್ರತಿ ಬುಧವಾರ ನಡೆಯುತ್ತಿರುವ ಸಾವಯವ ತರಕಾರಿ, ಹಣ್ಣು, ಆಹಾರ ಧಾನ್ಯ ಸೇರಿದಂತೆ ವಿವಿಧ ಕೃಷಿ ಉತ್ಪನ್ನಗಳ ರೈತ ಸಂತೆಗೆ ಗ್ರಾಹಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ರೈತರು ತಾವು ಬೆಳೆದ ಉತ್ಪನ್ನಗಳನ್ನು ನೇರವಾಗಿ ಗ್ರಾಹಕರಿಗೆ ಮಾರಾಟ ಮಾಡುತ್ತಿರುವುದರಿಂದ ಸಂತೆ ಜನರ ಗಮನ ಸೆಳೆಯುತ್ತಿದೆ.

ಕಳೆದ ಹಲವು ವಾರಗಳಿಂದ ನಡೆಯುತ್ತಿರುವ ಈ ರೈತ ಸಂತೆ ಪ್ರತಿವಾರ ಬುಧವಾರ ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನದವರೆಗೆ ನಡೆಯುತ್ತದೆ. ರಾಜ್ಯದ ವಿವಿಧ ಭಾಗಗಳಿಂದ ಆಗಮಿಸುವ ರೈತರು ತಮ್ಮ ಜಮೀನಿನಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ತರಕಾರಿ, ಹಣ್ಣು ಹಾಗೂ ಆಹಾರ ಧಾನ್ಯಗಳನ್ನು ನೇರವಾಗಿ ಗ್ರಾಹಕರಿಗೆ ಮಾರಾಟ ಮಾಡುತ್ತಿದ್ದಾರೆ. ಮಧ್ಯವರ್ತಿಗಳ ಹಾವಳಿ ಇಲ್ಲದೆ ಕಡಿಮೆ ಲಾಭದಲ್ಲಿ ಉತ್ಪನ್ನಗಳನ್ನು ಮಾರಾಟ ಮಾಡುತ್ತಿರುವುದು ಗ್ರಾಹಕರಿಗೆ ಅನುಕೂಲವಾಗಿದೆ.

ಸಾವಯವ ಹಣ್ಣು, ತರಕಾರಿಗಳಿಗೆ ಹೆಚ್ಚಿದ ಬೇಡಿಕೆ

ಸಂತೆ ಆರಂಭವಾಗುತ್ತಿದ್ದಂತೆ ಏಲಕ್ಕಿ ಬಾಳೆಹಣ್ಣು, ಪೇರಲ ಹಣ್ಣು, ಪಪ್ಪಾಯಿ, ನೆಲ್ಲಿಕಾಯಿ ಹಾಗೂ ಎಳನೀರಿಗೆ ಉತ್ತಮ ಬೇಡಿಕೆ ಕಂಡುಬಂದಿದೆ. ಬಿಸಿಬಿಸಿ ಮೆಣಸಿನಕಾಯಿ ಸೇರಿದಂತೆ ವಿವಿಧ ತರಕಾರಿಗಳೂ ಗ್ರಾಹಕರಿಂದ ಖರೀದಿಯಾಗಿವೆ. ಸಾವಯವ ಪದ್ಧತಿಯಲ್ಲಿ ಬೆಳೆದ ಉತ್ಪನ್ನಗಳ ಗುಣಮಟ್ಟ ಹಾಗೂ ತಾಜಾತನ ಗ್ರಾಹಕರನ್ನು ಆಕರ್ಷಿಸುತ್ತಿದೆ.

ಮಾರುಕಟ್ಟೆ ದರಕ್ಕಿಂತ ಕಡಿಮೆ ಬೆಲೆಗೆ ಮಾರಾಟ

ಸಾಮಾನ್ಯ ಮಾರುಕಟ್ಟೆಯಲ್ಲಿ ಪ್ರತಿ ಕೆ.ಜಿ. ಏಲಕ್ಕಿ ಬಾಳೆಹಣ್ಣು 100 ಇದ್ದರೆ, ರೈತ ಸಂತೆಯಲ್ಲಿ 80ಕ್ಕೆ ಮಾರಾಟ ಮಾಡಲಾಗುತ್ತಿದೆ. ಏಳಬೆಂಚೆ ಗ್ರಾಮದ ರೈತ ಈಶ್ವರ ರೆಡ್ಡಿ ಅವರು ಒಂದು ಎಳನೀರನ್ನು 60ಕ್ಕೆ ಮಾರಾಟ ಮಾಡುತ್ತಿದ್ದಾರೆ. ಟೊಮೆಟೊ, ಹೀರೆಕಾಯಿ ಸೇರಿದಂತೆ ವಿವಿಧ ತರಕಾರಿಗಳು ಕೆ.ಜಿ.ಗೆ 50ರಂತೆ ಲಭ್ಯವಿವೆ.

ಇದರ ಜೊತೆಗೆ ಪಾಲಕ್, ಕರಿಬೇವು, ಮೆಂತೆ ಸೇರಿದಂತೆ ವಿವಿಧ ಸೊಪ್ಪುಗಳು ಹಾಗೂ ರೊಟ್ಟಿ, ಚಟ್ನಿಪುಡಿ, ಚಕ್ಕುಲಿ, ಉಪ್ಪಿನಕಾಯಿ, ಅಕ್ಕಿಮೊಕ್ಕೆ ಮತ್ತು ಅಡುಗೆ ಎಣ್ಣೆಯಂತಹ ಆಹಾರ ಪದಾರ್ಥಗಳೂ ಮಾರಾಟಕ್ಕೆ ಲಭ್ಯವಿವೆ.

ವಾರಕ್ಕೊಮ್ಮೆ ನಡೆಯುವ ಈ ರೈತ ಸಂತೆಯಲ್ಲಿ ಗ್ರಾಹಕರು ಮನೆಯ ಅಗತ್ಯಕ್ಕೆ ಬೇಕಾದ ತಾಜಾ ಹಾಗೂ ಸಾವಯವ ಉತ್ಪನ್ನಗಳನ್ನು ಖರೀದಿಸಬಹುದಾಗಿದೆ.

ರೈತರಿಗೆ ನೇರ ಮಾರುಕಟ್ಟೆ ಸೌಲಭ್ಯ ದೊರೆಯುವುದರ ಜೊತೆಗೆ ಗ್ರಾಹಕರಿಗೂ ಕೈಗೆಟುಕುವ ದರದಲ್ಲಿ ಉತ್ಪನ್ನಗಳು ಲಭ್ಯವಾಗುತ್ತಿವೆ. ಸಂತೆಗೆ ಬರುವ ಗ್ರಾಹಕರು ಪ್ಲಾಸ್ಟಿಕ್ ಬಳಕೆ ತಪ್ಪಿಸಲು ಮನೆಯಿಂದಲೇ ಕೈಚೀಲಗಳನ್ನು ತೆಗೆದುಕೊಂಡು ಬರಬೇಕು ಎಂದು ಸಲಹೆ ನೀಡಲಾಗಿದೆ.

ಕಾರ್ಯಕರ್ತರನ್ನು ಶಾಸಕ ನೇಮಿರಾಜ್ ನಾಯ್ಕ ವಿಶ್ವಾಸಕ್ಕೆ ತೆಗೆದುಕೊಳ್ಳುತ್ತಿಲ್ಲ: ಜೆಡಿಎಸ್ ಸಭೆಯಲ್ಲಿ ಆಕ್ರೋಶ



ಕೊಟ್ಟೂರು: ಪಕ್ಷ ಸಂಘಟನೆಗೆ ಕಾರ್ಯಕರ್ತರೇ ಬಲ, ಶಾಸಕ ನೇಮಿರಾಜ್ ನಾಯ್ಕ ಕಾರ್ಯಕರ್ತರೊಂದಿಗೆ ಸಮನ್ವಯತೆಯನ್ನು ಕಾಪಾಡಿಕೊಳ್ಳಬೇಕೆಂದು ಜೆಡಿಎಸ್ ಕಾರ್ಯಕರ್ತರು ಒತ್ತಾಯಿಸಿದರು

ಪಟ್ಟಣದಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ಮೃತ್ಯುಂಜಯ ಬಾದಾಮಿ ಅಧ್ಯಕ್ಷತೆಯಲ್ಲಿ ನಡೆದ ಪಕ್ಷ ಸಂಘಟನಾ ಸಭೆ ಗೊಂದಲದ ಗೂಡಾಗಿ ಪರಿವರ್ತನೆಗೊಂಡಿತು.

ಕಾರ್ಯಕರ್ತರಿಲ್ಲದೆ ಪಕ್ಷ ಸಂಘಟನೆ ಸಾಧ್ಯವಿಲ್ಲ. ಆದರೆ ಪಕ್ಷದ ಕಾರ್ಯಕರ್ತರನ್ನು ಶಾಸಕ ನೇಮಿರಾಜ್ ನಾಯ್ಕ ವಿಶ್ವಾಸಕ್ಕೆ ತೆಗೆದುಕೊಳ್ಳುತ್ತಿಲ್ಲ ಎಂಬ ಅಸಮಾಧಾನ ಸಭೆಯಲ್ಲಿ ವ್ಯಕ್ತವಾಯಿತು. ಸಭೆಯಲ್ಲಿ ಜೆಡಿಎಸ್ ಪಕ್ಷದ ಸಂಘಟನೆ, ಕಾರ್ಯಕರ್ತರ ಪಾತ್ರ ಹಾಗೂ ಶಾಸಕರ ಕಾರ್ಯವೈಖರಿ ಕುರಿತು ಅಸಮಾಧಾನ ಸ್ಫೋಟಗೊಂಡು ಕಾರ್ಯಕರ್ತರು ತಮ್ಮ ಅಳಲು ಮತ್ತು ನೋವನ್ನು ಬಹಿರಂಗ ಪಡಿಸಿದರು.

ಚುನಾವಣೆಯ ಸಂದರ್ಭದಲ್ಲಿ ಪಕ್ಷಕ್ಕಾಗಿ ಹಗಲಿರುಳು ಶ್ರಮಿಸುವ ಕಾರ್ಯಕರ್ತರನ್ನು ಶಾಸಕರು ಕಡೆಗಣಿಸುತ್ತಿರುವುದಲ್ಲದೆ ಸಂಪೂರ್ಣ ನಿರ್ಲಕ್ಷ್ಯವಹಿಸಿರುವುದು ಜೆಡಿಎಸ್ ಬಲ ಕುಗ್ಗಲುಕಾರಣವಾಗಬಹುದು ಎಂಬ ಪರೋಕ್ಷವಾಗಿ ಎಚ್ಚರಿಕೆಯನ್ನು ರವಾನಿಸಿದರು. ಪಕ್ಷದ ಸಂಘಟನೆ ಬಲಗೊಳ್ಳಬೇಕಾದರೆ ತಳಮಟ್ಟದ ಕಾರ್ಯಕರ್ತರಿಗೆ ಗೌರವ ನೀಡಬೇಕು. ಅವರ ಅಭಿಪ್ರಾಯಗಳನ್ನು ಆಲಿಸಿ, ಪಕ್ಷದ ಪ್ರಮುಖ ನಿರ್ಧಾರಗಳಲ್ಲಿ ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು ಎಂದು ಸಭೆಯಲ್ಲಿ ಕಾರ್ಯಕರ್ತರು ಒತ್ತಾಯಿಸಿದರು.

ಪಕ್ಷದ ಸಂಘಟನೆಯನ್ನು ತಳಮಟ್ಟದಿಂದ ಬಲಪಡಿಸಲು ಕಾರ್ಯಕರ್ತರ ಒಗ್ಗಟ್ಟು ಮತ್ತು ಮುಖಂಡರ ಸಹಕಾರ ಅಗತ್ಯವಾಗಿದ್ದು, ಕಾರ್ಯಕರ್ತರ ಅಸಮಾಧಾನವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಸಭೆಯಲ್ಲಿ ಆಗ್ರಹಪಡಿಸಲಾಯಿತು. ಜೆಡಿಎಸ್ ಮುಖಂಡ ಸುಧಾಕರ ಪಾಟೇಲ್ ಮಾತನಾಡಿ ನಾವು ಮೂಲತಃ ಕಾಂಗ್ರೆಸ್ ನವರು ಭೀಮನಾಯ್ಕ ರವರ ದುರಾಡಳಿತದಿಂದ ಬೇಸತ್ತು ಜೆಡಿಎಸ್ ಗೆ ಬೆಂಬಲಿಸಿ ನೇಮಿರಾಜ್ ನಾಯ್ಕರನ್ನು ಗೆಲ್ಲಿಸಿದೆವು. ಇವರೂ ಸಹಾ ಮುಖಂಡರನ್ನು ಕಾರ್ಯಕರ್ತರನ್ನು ಕಡೆಗಣಿಸುತ್ತಿದ್ದು ಇದರ ಪ್ರತಿಫಲವನ್ನು ನೇಮಿರಾಜ್ ನಾಯ್ಕ ಉಣ್ಣಲಿದ್ದಾರೆ ಎಂದು ನೇರವಾಗಿ ಹೇಳಿದರು.

ಎಂ.ಎಂ.ಜೆ. ಶೋಭಿತ್. ಬಿ.ಎಸ್.ಆರ್. ಮೂಗಪ್ಪ ಮಾತನಾಡಿದರು.ಸಭೆಯಲ್ಲಿ ಭರಮರೆಡ್ಡಿ, ಹಗರಿಬೊಮ್ಮನಹಳ್ಳಿ ಕ್ಷೇತ್ರದ ಅಧ್ಯಕ್ಷ ಮಲ್ಲಿಕಾರ್ಜುನ್, ಜಿಲ್ಲಾ ಅಧ್ಯಕ್ಷ ಬಾದಾಮಿ ಮೃತ್ಯುಂಜಯ,ಬಾವಿಕಟ್ಟೆ ಶಿವಾನಂದ,ಬಿ.ಎಸ್.ಆರ್. ಮೂಗಪ್ಪ, ಪರಮೇಶ, ತಿಮ್ಮಲಾಪುರ ಕೊಟ್ರೇಶ್, ಅಂಬಳಿ ದೇವೇಂದ್ರಗೌಡ, ಹರಾಳು ಬಸವರಾಜ್ ಸೇರಿದಂತೆ ಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಪಕ್ಷದಲ್ಲೇ ಮೋಸ ಮಾಡುವವರು, ಬೆನ್ನಿಗೆ ಚಾಕು ಹಾಕುವವರು ಇದ್ದಾರೆ;ಸ್ವಪಕ್ಷೀಯರ ವಿರುದ್ಧವೇ ಮಲ್ಲಿಕಾರ್ಜುನ್ ಆಕ್ರೋಶ



ದಾವಣಗೆರೆ: ಕಾಂಗ್ರೆಸ್ ಪಕ್ಷದಲ್ಲೇ ಮೋಸ ಮಾಡುವವರು ಹಾಗೂ ಬೆನ್ನಿಗೆ ಚಾಕು ಹಾಕುವವರು ಇದ್ದಾರೆ. ಕಾಂಗ್ರೆಸ್ ಅನ್ನ ತಿನ್ನುತ್ತೀರಿ, ಸ್ವಲ್ಪ ನಿಷ್ಠೆಯಿಂದ ಇರಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಸ್ವಪಕ್ಷದ ನಾಯಕರ ವಿರುದ್ಧವೇ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ನಗರದ ಪಾರ್ವ